ಸಂಪುಟ : 10 ಸಂಚಿಕೆ: 215 ಪುಟ : 4+2 ಬೆಲೆ: 3.00 ರವಿವಾರ ಅಕ್ಟೋಬರ್ 05 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 215 Pages : 4+2 Price : 3.00 Sunday October 05 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮಹಿಳೆಯನ್ನು ಎಲ್ಲರೂ ಗೌರವಿಸಬೇಕು



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಅನಾದಿ ಕಾಲದಿಂದಲೂ ಮಹಿಳೆಗೆ ವಿಶೇಷ ಸ್ಥಾನವಿದೆ. ಮಹಿಳೆಯರನ್ನು ಪ್ರತಿಯೊಬ್ಬರೂ ಗೌರವಿಸಬೇಕು ಎಂದು ಶಿರಹಟ್ಟಿ ಫಕ್ಕೀರೇಶ್ವರಮಠದ ಮಾಹಾರಾಜ ನಿರಂಜನ ಜಗದ್ಗುರು ಫಕ್ಕೀರ ದಿಂಗಾಲೇಶ್ವರ ಮಾಹಾಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಗ್ರಾಮದೇವತಾ ದೇವಸ್ಥಾನದಲ್ಲಿ ನವರಾತ್ರಿ ಉತ್ಸವದ ಅಂಗವಾಗಿ ಜರುಗಿದ ಪುರಾಣ ಪ್ರವಚನದ ಮಾಹಾಮಂಗಲೋತ್ಸವದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ನಾವು ಜಾತಿ, ಮತ, ಲಿಂಗ, ಸಿರಿ-ಸಂಪತ್ತು ಎಂದು ಭೇದ ಭಾವ ಮಾಡದೇ ಎಲ್ಲರನ್ನೂ ಪ್ರೀತಿ ವಿಶ್ವಾಸದಿಂದ ಕಾಣಬೇಕು. ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ ಬೆಳೆಸಬೇಕು. ಮಕ್ಕಳನ್ನು ನಾಡಿನ ಉತ್ತಮ ಪ್ರಜೆಗಳನ್ನಾಗಿ ಮಾಡುವ ಶಕ್ತಿ ನಮ್ಮಲ್ಲೇ ಅಡಕವಾಗಿರುತ್ತದೆ. ದೇವಿ ಪುರಾಣ ಆಲಿಸುವುದರಿಂದ ನಮ್ಮಲ್ಲಿನ ದುರ್ಗುಣಗಳು ನಾಶವಾಗುತ್ತವೆ ಎಂದರು.

ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಮಾತನಾಡಿ, ದೇವಿ ಪುರಾಣವೆಂದರೆ ನಮ್ಮ ದೇಹದ ಪುರಾಣವಾಗಿದ್ದು, ನಮ್ಮಲ್ಲಿರುವ ದುಷ್ಟ ಶಕ್ತಿಗಳನ್ನು ನಿಗ್ರಹಿಸಲು ಸಹಕಾರಿಯಾಗಿದೆ. 31 ವರ್ಷಗಳ ಕಾಲ ಪುರಾಣ ಪ್ರವಚನವನ್ನು ಪಂಚಾಕ್ಷರಯ್ಯ ಮರಿದೇವರಮಠ ನಡೆಸಿಕೊಂಡು ಬಂದಿರುವ ಕಾರ್ಯ ಶ್ಲಾಘನಿಯ ಎಂದರು.

ಮಂಗಲ ▸▸4ನೇ ಪುಟಕ್ಕೆ

ಜಿಲ್ಲಾಡಳಿತದಲ್ಲಿ ಕೆಳಹಂತದ ಯೋಜನೆಗಳೊಂದಿಗೆ ವಾರ್ಷಿಕ ಜಿಲ್ಲಾ ಅಭಿವೃದ್ಧಿ ಯೋಜನೆ ತಯಾರಿಸುವ ಕಾರ್ಯಾಗಾರ

# ಗ್ರಾಮಾಭಿವೃದ್ಧಿಗೆ ಕೆಳಹಂತದ ವಾರ್ಷಿಕ ಯೋಜನೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮಾಭಿವೃದ್ಧಿಗೆ ಕೆಳ ಹಂತದ ವಾರ್ಷಿಕ ಯೋಜನೆಗಳು ಅತ್ಯಂತ ಸಹಕಾರಿಯಾಗಿವೆ. ವಿಕೇಂದ್ರೀಕರಣ ವ್ಯವಸ್ಥೆಯಿಂದ ಹಾಗೂ ಸರಿಯಾದ ಯೋಜನೆಗಳಿಂದ ಮಹತ್ತರ ಅಭಿವೃದ್ಧಿ ಸಾಧನೆ ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ಧರಾಮಯ್ಯ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶನಿವಾರ ಆಯೋಜಿಸಲಾಗಿದ್ದ ಕೆಳಹಂತದ ಯೋಜನೆಗಳೊಂದಿಗೆ ವಾರ್ಷಿಕ ಜಿಲ್ಲಾ ಅಭಿವೃದ್ಧಿ ಯೋಜನೆಯನ್ನು ತಯಾರಿಸುವ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ಸಂತ ರಾಜಕಾರಣಿ, ಮಾಜಿ ಶಾಸಕ ಡಿ.ಆರ್. ಪಾಟೀಲರು ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ಅಪಾರ ಅನುಭವ ಹಾಗೂ ಅಭಿವೃದ್ಧಿಯ ಮುಂದಾಲೋಚನೆ ಉಳ್ಳವರಾಗಿದ್ದರಿಂದ ನನ್ನ ತಂದೆಯವರಾದ ಮುಖ್ಯಮಂತ್ರಿ ಸಿದ್ಧಾರಾಮಯ್ಯ ಅವರು ಡಿ.ಆರ್. ಪಾಟೀಲರನ್ನು ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರನ್ನಾಗಿ ಮಾಡಿದ್ದಾರೆ ಎಂದರು.




ಡಿ.ಆರ್. ಪಾಟೀಲರ ಅಪಾರ ಅನುಭವದಿಂದ ವಿಕೇಂದ್ರೀಕರಣ ವ್ಯವಸ್ಥೆ ಹಾಗೂ ಯೋಜನೆ ತಯಾರಿಕೆ ಕರಡು ಪ್ರತಿ ಇಗಾಗಲೇ ಗದಗ ಜಿಲ್ಲೆಯಲ್ಲಿ ಸಿದ್ಧವಾಗಿದೆ. ಇದೇ ರೀತಿ ಮೈಸೂರಲ್ಲಿ ಸಹ ಅಭಿವೃದ್ಧಿ ಯೋಜನೆಯ ಕರಡು ತಯಾರಿಸಲಾಗುವುದು ಎಂದು ಹೇಳಿದರು. ವಾರ್ಡ್, ಗ್ರಾಮ ಮಟ್ಟದಲ್ಲಿ ಸಭೆ ನಡೆಸಿ ತಮ್ಮ ಗ್ರಾಮದಲ್ಲಿ ಅಗತ್ಯವಾದ ಅಭಿವೃದ್ಧಿ ಕೆಲಸಗಳ ಕುರಿತು ಯೋಜನಾ ವರದಿ ಕರಡು ಸಿದ್ದಪಡಿಸಿ, ತಾ.ಪಂ, ಜಿ.ಪಂ ಮೂಲಕ ಸರ್ಕಾರಕ್ಕೆ ಕಳುಹಿಸಿ ಆದ್ಯತೆಯ ಆಧಾರದಲ್ಲಿ ಗ್ರಾಮಗಳ ಯೋಜನೆಗಳ ಅನುಷ್ಠಾನಕ್ಕೆ ಇದು ಸಹಕಾರಿ ಆಗಲಿದೆ. ಇದೊಂದು ಉತ್ತಮ ಕಾರ್ಯವಾಗಿದೆ ಎಂದು ಡಾ. ಯತೀಂದ್ರ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

> ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ವಿಕೇಂದ್ರೀಕರಣ ವ್ಯವಸ್ಥೆ ಗ್ರಾಮ ಮಟ್ಟದಿಂದ ಬಲವರ್ಧನೆಯಾಗಬೇಕು. ಆಗ ಮಾತ್ರ ಗ್ರಾಮಗಳು ಅಭಿವೃದ್ಧಿಯೊಂದಿಗೆ ಆರ್ಥಿಕ ಸದೃಢತೆ ಸಾಧಿಸಲಿವೆ. ರಾಜ್ಯದ ಎಲ್ಲ ಗ್ರಾಮಗಳಲ್ಲೂ ಸಹ ವಾರ್ಷಿಕ ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ತಯಾರಿಸಿ ಮುಂದಿನ ಹಂತಕ್ಕೆ ಕಳುಹಿಸಿಕೊಡಬೇಕು. ಅದನ್ನು ಸಹ ನಿಗದಿಪಡಿಸಿದ ಅವಧಿಯೊಳಗೆ ಪುರ್ಣಗೊಳಿಸಬೇಕು ಎಂದರು.

ಕಾರ್ಯಾಗಾರದಲ್ಲಿ ಹುಬ್ಬಳ್ಳಿಯ ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ, ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಅಶೋಕ ಮಂದಾಲಿ, ಸುಜಾತ ದೊಡ್ಮನಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಉಪ ಕಾರ್ಯದರ್ಶಿ ಸಿಆರ್ ಮುಂಡರಗಿ, ಎ.ಎ. ಕಂಬಾಳಿಮಠ, ಎಂ.ವಿ. ಚಳಗೇರಿ ಸೇರಿದಂತೆ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಪಿಡಿಓಗಳು ಇದ್ದರು.

ವಿಜ್ರಂಭಣೆಯಿಂದ ಜರುಗಿದ ಉರುಸ್ । ಸಾವಿರಾರು ಭಕ್ತರಿಗೆ ಅನ್ನಸಂತರ್ಪಣೆ

# ಶರಣರ ತತ್ವ-ಸಂದೇಶಗಳನ್ನು ಮೈಗೂಡಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ರೋಣ

ಹಜರತ್ ಮೆಹಬೂಬ ಸುಬ್ಹಾನಿ ಶರಣರ ತತ್ವ ಸಂದೇಶಗಳನ್ನು ಸರ್ವ ಜನಾಂಗದವರು ಮೈಗೂಡಿಸಿಕೊಳ್ಳಬೇಕು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶುಕ್ರವಾರ ರಾತ್ರಿ ಜರುಗಿದ ಹಜರತ್ ಮೆಹಬೂಬ ಸುಬ್ಹಾನಿ ಶರಣರ ಉರುಸ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ನಾಡಿನ ಎಲ್ಲ ಧರ್ಮಗಳಲ್ಲಿಯೂ ಶರಣರು, ಸೂಫಿ ಸಂತರು ಜನ್ಮ ತಾಳಿ ಮಾನವನ ಏಕತೆಗೆ ಶ್ರಮಿಸಿದ್ದಾರೆ, ಎಲ್ಲ ಜನಾಂಗದವರು ಕೂಡಿ ಬಾಳಿ ಎಂಬ ಸಂದೇಶವನ್ನು ಸಾರಿದ್ದಾರೆ. ಶರಣರು, ಸೂಫಿ ಸಂತರು, ಮಠಾಧೀಶರು ಸಮಾಜದ ಏಕತೆಗೆ ತಮ್ಮನ್ನು ತಾವು ಅರ್ಪಿಸಿಕೊಂಡವರು. ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಸಾಗಬೇಕು ಎಂದರು.

ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಮಾತನಾಡಿ, ರೋಣ ಪಟ್ಟಣ ಸೇರಿದಂತೆ ತಾಲೂಕಿನಲ್ಲಿ ನಡೆಯುವ ಎಲ್ಲ ಧಾರ್ಮಿಕ ಕಾರ್ಯಗಳಲ್ಲಿ ಎಲ್ಲರೂ ಭಾಗಿಯಾಗುವುದು ನಮ್ಮ ವಿಶೇಷತೆಯಾಗಿದೆ. ನಮ್ಮ ಹಿರಿಯರು ನಮಗೆ ಒಳ್ಳೆಯ ಮಾರ್ಗವನ್ನು ತೋರಿಸಿಕೊಟ್ಟಿದ್ದಾರೆ. ಅವರು ಹಾಕಿಕೊಟ್ಟ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕಿದೆ. ಇಂದಿನ ಯುವ ಪೀಳಿಗೆ ಶರಣರ, ಸೂಫಿ ಸಂತರ ಚಿಂತನೆಗಳನ್ನು ಒಪ್ಪಿಕೊಂಡು ಸಮಾಜದಲ್ಲಿ ಗೌರಯುತ ಬದುಕನ್ನು ಕಟ್ಟಿಕೊಳ್ಳಬೇಕು. ಮುಸ್ಲಿಂ ಬಂಧುಗಳು ಮೆಹಬೂಬ ಸುಬ್ಹಾನಿಯವರ ಸವಿ ನೆನಪಿನಲ್ಲಿ ಗ್ಯಾರವಿ ಸಹ ಮಾಡುತ್ತಾರೆ, ಹಿಂದೂ ಬಾಂಧವರನ್ನು ಮನೆಗೆ ಆಹ್ವಾನಿಸಿ ಸಿಹಿ ಭೋಜನ ಉಣಬಡಿಸುತ್ತಾರೆ. ಇದು ನಮ್ಮ ನೆಲದ ಸಂಸ್ಕೃತಿಯಾಗಿದೆ ಎಂದರು.

> ಹಜರತ್ ಮೆಹಬೂಬ ಸುಬ್ಹಾನಿ ಶರಣರ ಧಾರ್ಮಿಕ ಕಾರ್ಯಗಳು ಜಗತ್ತಿನೆಲ್ಲೆಡೆ ಶ್ರದ್ಧಾ-ಭಕ್ತಿಯಿಂದ ನಡೆಯುತ್ತವೆ. ಮುಖ್ಯವಾಗಿ ನಮ್ಮ ಕನ್ನಡ ನೆಲದಲ್ಲಿ ಸರ್ವ ಜನಾಂಗದವರು ಸೇರಿ ಅತ್ಯಂತ ಭಕ್ತಿ ಮತ್ತು ಸಡಗರದಿಂದ ಉರುಸ್ ಧಾರ್ಮಿಕ ಕಾರ್ಯವನ್ನು ನೆರವೇರಿಸುತ್ತಾರೆ. ಇದಕ್ಕೆ ಕಾರಣ, ನಮ್ಮ ನೆಲದ ಗುಣಧರ್ಮ, ಏಕತೆ ಮತ್ತು ಸೌಹಾರ್ದತೆಯಾಗಿದೆ ಎಂಬುದನ್ನು ಮರೆಯಬಾರದು. ಎಲ್ಲ ಧಾರ್ಮಿಕ ಕಾರ್ಯಗಳಲ್ಲಿ ಎಲ್ಲ ಸಮಾಜದವರು ಭಾಗಿಯಾಗಿ ಧಾರ್ಮಿಕ ಕಾರ್ಯಗಳಿಗೆ ವಿಶೇಷ ಅರ್ಥವನ್ನು ಕಲ್ಪಿಸಬೇಕು.
>
> **– ಜಿ.ಎಸ್. ಪಾಟೀಲ.**
> ಶಾಸಕರು, ರೋಣ.

ಹಜರತ್ ಸುಲೇಮಾನ ಶಾವಲಿ ದರ್ಗಾದ ಅಜ್ಜನವರು ಧಾರ್ಮಿಕ ಕಾರ್ಯ ನೆರವೇರಿಸಿದರು. ಉರುಸ್ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಸಾವಿರಾರು ಭಕ್ತರು ಸಕ್ಕರೆ ನೈವೇದ್ಯ ಸಮರ್ಪಿಸಿ, ಪ್ರಸಾದ ಸ್ವೀಕರಿಸಿದರು.

ಅಂಜುಮನ್ ಅಧ್ಯಕ್ಷ ಬಾವಾಸಾಬ ಬೆಟಗೇರಿ, ಪುರಸಭೆ ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ, ಮಲೀಕ ಯಲಿಗಾರ, ಸಂಗಪ್ಪ ಜಿಡ್ಡಿಬಾಗಿಲ, ಬಸಪ್ಪ ಕುರಿ, ದುರ್ಗಪ್ಪ ಹಿರೇಮನಿ, ಮೌನೇಶ ಹಾದಿಮನಿ, ಹುಸೇನ ಭಾವಿ, ಆಶ್ಫಾಕ ಮದರಂಗಿ, ರೆಹಮಾನ್ ಕೊಪ್ಪಳ, ಮಾಬುಸಾಬ ರಾಜೆಖಾನ್, ರಫೀಕ ಬಾಡಿನ, ರಜಾಕ ಜಕ್ಕಲಿ, ಮಾಬುಸಾಬ ಮುಜಾವರ, ನಬಿಸಾಬ ಗುದಿಗನೂರ, ರಿಯಾಜ ರಾಜೆಖಾನ್ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

## ಶಿರಹಟ್ಟಿ ಘಟನೆಯಲ್ಲಿ ರಾಜಕೀಯ ಬೇಡ




■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿಯಲ್ಲಿ ಈಚೆಗೆ ನಡೆದ ಘಟನೆಗೂ ಎಸ್‌ಡಿಪಿಐಗೂ ಯಾವುದೇ ಸಂಬಂಧವಿಲ್ಲ. ಆದರೆ ಕೆಲ ಕೋಮುವಾದಿ ಶಕ್ತಿಗಳು ವೈಯಕ್ತಿಕ ಜಗಳವನ್ನು ರಾಜಕೀಯಕ್ಕೆ ಬಳಸಿಕೊಕೊಂಡು ಎಸ್‌ಡಿಪಿಐ ವಿರುದ್ಧ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಪಕ್ಷದ ಜಿಲ್ಲಾಧ್ಯಕ್ಷ ಬಿಲಾಲ ಗೋಕಾವಿ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಘಟನೆಗೆ ಸಂಬಂಧಿಸಿದಂತೆ ಎರಡೂ ಸಮುದಾಯದ ಜನರ ಮೇಲೆ ಪೊಲೀಸರು ದೂರು ದಾಖಲಿಸಿಕೊಂಡಿದ್ದಾರೆ. ಘಟನೆ ವೈಯಕ್ತಿಕ ವಿಚಾರಕ್ಕೆ ನಡೆದಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಈಗಾಗಲೇ ಸ್ಪಷ್ಟನೆ ನೀಡಿದ್ದಾರೆ. ಹೀಗಾಗಿ ಈ ವಿಚಾರದಲ್ಲಿ ರಾಜಕೀಯ ಬೆರೆಸುವುದು ಸರಿಯಲ್ಲ ಎಂದು ಅವರು ಹೇಳಿದರು.

ಶಿರಹಟ್ಟಿ ಘಟನೆಗೆ ಸಂಬಂಧಿಸಿದಂತೆ ಪೊಲೀಸರು ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಿ. ಆದರೆ ಅಮಾಯಕರನ್ನು ಬಂಧಿಸಿ, ಕಿರುಕುಳ ನೀಡುವುದು ಬೇಡ. ಇನ್ನು ಶಿರಹಟ್ಟಿ ಶಾಸಕರು ಸಹ ಈ ವಿಚಾರದಲ್ಲಿ ರಾಜಕೀಯ ಮಾಡದೆ, ಸತ್ಯಾಸತ್ಯತೆ ಅರಿಯುವ ಪ್ರಯತ್ನ ಮಾಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್‌ಡಿಪಿಐ ಮುಖಂಡರಾದ ಮಹಮ್ಮದ ಅಫಾನ್ ತರಫದಾರ, ಜಿಲಾನಿ ಮುಲ್ಲಾ, ಹಿದಾಯತುಲ್ಲಾ ಕಾಗದಗಾರ, ಅನ್ವರ ಮುಲ್ಲಾ, ಜಿಲಾನಿ ಲಕ್ಕುಂಡಿ ಇತರರು ಉಪಸ್ಥಿತರಿದ್ದರು.

## ಅಂಜುಮನ್ ವತಿಯಿಂದ ಕೃತಜ್ಞತಾ ಸಭೆ ಇಂದು




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅಂಜುಮನ್ ಕಮಿಟಿ ಚುನಾವಣೆಯಲ್ಲಿ ಇಂಕ್ವಿಲಾಬ್ ತಂಡದ 8 ಜನ ಆಯ್ಕೆಯಾಗಿದ್ದು, ಮತ ನೀಡಿದ ಮತದಾರರಿಗೆ, ಬೆಂಬಲಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುವ ಸಮಾರಂಭವನ್ನು ಅ. 5ರಂದು ಸಂಜೆ 6.30ಕ್ಕೆ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಕಮಿಟಿ ನೂತನ ಸದಸ್ಯ ಅನ್ವರ ಬಾಗೇವಾಡಿ ತಿಳಿಸಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, 17 ವರ್ಷಗಳ ನಂತರ ಒಟ್ಟು 11 ಸ್ಥಾನಗಳಿಗೆ ಚುನಾವಣೆ ನಡೆಯಿತು. ಅದರಲ್ಲಿ 8 ಜನ ಇಂಕ್ವಿಲಾಬ್ ತಂಡದ ಸದಸ್ಯರು ಆಯ್ಕೆಯಾಗಿದ್ದಾರೆ. ಹೀಗಾಗಿ, ಮತದಾರರಿಗೆ ಗೌರವಪೂರ್ವಕವಾಗಿ ಕೃತಜ್ಞತೆ ಸಲ್ಲಿಸುವ ಸಂಬಂಧ ಬೃಹತ್ ರಕ್ತದಾನ ಶಿಬಿರ ನಡೆಸಿ, ಕೃತಜ್ಞತಾ ಸಮಾರಂಭವನ್ನು ನಡೆಸಲಾಗುವುದು ಎಂದು ತಿಳಿಸಿದರು.

ಈ ಸಭೆಗೆ ಮತದಾರರಷ್ಟೇ ಅಲ್ಲದೆ, ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಬೆಂಬಲ ಸೂಚಿಸಿದ ಎಲ್ಲರಿಗೂ ಆಹ್ವಾನಿಸಲಾಗಿದೆ. ಸಭೆಯಲ್ಲಿ ಅವರೆಲ್ಲರ ಅಭಿಪ್ರಾಯ, ಸಲಹೆ-ಸೂಚನೆ ಪಡೆದು ಕಾರ್ಯಕ್ರಮ ರೂಪಿಸುವ ಚಿಂತನೆ ಹೊಂದಿದ್ದೇವೆ.

ಶೀಘ್ರವೇ ಕಮಿಟಿ ಸಭೆಯನ್ನು ನಡೆಸಿ, ಅಧ್ಯಕ್ಷರ ಆಯ್ಕೆಯನ್ನೂ ಮಾಡಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎಂ.ಆರ್. ಸೋಂಪುರ, ಅಲ್ತಾಫ್ ಕೊಪ್ಪಳ, ಮಹಮ್ಮದ್ ಸೊಯಲ್ ನಾರಾಯಣಕೇರಿ, ಮೈನುದ್ದೀನ್ ಬಿಜಾಪುರ, ಅನ್ವರಸಾಬ ಮುಲ್ಲಾ, ಮೆಹಬೂಬ ಕದಡಿ ಮುಂತಾದವರು ಉಪಸ್ಥಿತರಿದ್ದರು.

ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ ವಿರೋಧಿಸಿ ಅಹೋರಾತ್ರಿ ಧರಣಿ ನಾಳೆಯಿಂದ

# ನಮ್ಮನಮ್ಮಲ್ಲಿಯೇ ವಿಂಗಡನೆ ಸರಿಯಲ್ಲ




■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ, ಜಿಲ್ಲಾ ಬಂಜಾರ ಸಮುದಾಯಗಳ ಸಂಘಟನೆಗಳ ಆಶ್ರಯದಲ್ಲಿ, ನಾಯಕ, ಡಾವಸಾಣ, ಕಾರಭಾರಿ ಹಾಗೂ ಪಂಚರ ನೇತೃತ್ವದಲ್ಲಿ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ ವಿರೋಧಿಸಿ ಅ. 6ರಂದು ಮಹಾತ್ಮ ಗಾಂಧಿ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಬೃಹತ್ ಪಾದಯಾತ್ರೆ ನಡೆಸಿ, 11 ದಿನಗಳ ಕಾಲ ಅಹೋರಾತ್ರಿ ಧರಣಿ ನಡೆಸಲಾಗುವುದು ಎಂದು ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಅಧ್ಯಕ್ಷ ರವಿಕಾಂತ ಅಂಗಡಿ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಗಮೋಹನದಾಸ ಅವರು ಜಾತಿಗಳನ್ನು ವಿಂಗಡಿಸುವಾಗ ಹಿಂದುಳಿದ, ಅತ್ಯಂತ ಹಿಂದುಳಿದ ಸಮುದಾಯಗಳನ್ನು ಹೆಸರಿಸಿದ್ದಾರೆ. ಆದರೆ ಮೀಸಲಾತಿ ವರ್ಗೀಕರಿಸುವಾಗ ಸ್ಪೃಶ್ಯ, ಅಸ್ಪೃಶ್ಯ ಎಂದು ಅಸಾಂವಿಧಾನಿಕ ಪದಬಳಕೆ ಮಾಡಿರುವುದರ ಹಿಂದೆ ಯಾವ ತಂತ್ರಗಾರಿಕೆ ಇದೆ ಎನ್ನುವುದನ್ನು ಅವರೇ ಬಹಿರಂಗಪಡಿಸಬೇಕು. ಇದೇ ಪದಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲೂ ಬಳಕೆ ▸▸3ನೇ ಪುಟಕ್ಕೆ

> ಸರಕಾರ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸಿ ಸಿ ವರ್ಗದವರಿಗೂ ಶೇ. 6ರಷ್ಟು ಮೀಸಲಾತಿ ನೀಡಬೇಕು. ಸ್ಪೃಶ್ಯ, ಅಸ್ಪೃಶ್ಯ ಪದಬಳಕೆಯನ್ನು ಕಡತದಿಂದ ತೆಗೆದುಹಾಕಿ, ದಮನಿತ ಅಥವಾ ವಿಮುಕ್ತ ಜಾತಿಗಳೆಂದು ಹೆಸರಿಸಬೇಕು. ಅಲೆಮಾರಿಗಳಿಗೆ ಪ್ರತ್ಯೇಕವಾಗಿ ಶೇ. 1ರಷ್ಟು ಮೀಸಲಾತಿ ನೀಡಬೇಕು. ಖಾಸಗಿ ಔದ್ಯೋಗಿಕ ವಲಯದಲ್ಲೂ ಮೀಸಲಾತಿ ಕಲ್ಪಿಸಬೇಕು. ನಾಗಮೋಹನದಾಸ ವರದಿ ತಿರಸ್ಕರಿಸಬೇಕು ಎನ್ನುವ ಬೇಡಿಕೆಯೊಂದಿಗೆ ಹೋರಾಟ ಆರಂಭಿಸಲಿದ್ದೇವೆ.
>
> **– ರವಿಕಾಂತ ಅಂಗಡಿ.**
> ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಅಧ್ಯಕ್ಷ.

## ಮೆಟ್ರೋ ರೈಲು ಹಳಿಗೆ ಹಾರಿ ಆತ್ಮಹತ್ಯೆಗೆ ಯತ್ನಿಸಿದ ಡಿ ಗ್ರೂಪ್ ನೌಕರ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮೆಜೆಸ್ಟಿಕ್ ನ ನಾಡಪ್ರಭು ಕೆಂಪೇಗೌಡ ಮೆಟ್ರೋ ನಿಲ್ದಾಣದ ರೈಲು ಹಳಿಗೆ ಹಾರಿ ಡಿ ಗ್ರೂಪ್ ನೌಕರ ಆತ್ಮಹತ್ಯೆಗೆ ಯತ್ನಿಸಿರುವಂತಹ ಘಟನೆ ಜರುಗಿದೆ.

ವಿಧಾನಸೌಧದಲ್ಲಿ ಕಾರ್ಯನಿರ್ವಹಿಸುತ್ತಿದ್ದ ವೀರೇಶ್ (35) ಆತ್ಮಹತ್ಯೆಗೆ ಯತ್ನಿಸಿದ ಡಿ ಗ್ರೂಪ್ ನೌಕರ. ಮಾದವಾರ-ರೇಷ್ಮೆ ಸಂಸ್ಥೆ ಹಸಿರು ಮಾರ್ಗದ ಹಳಿಗೆ ಮಧ್ಯಾಹ್ನ 3.19ರ ಸುಮಾರಿಗೆ ವೀರೇಶ್ ಆತ್ಮಹತ್ಯೆಗೆ ಯತ್ನಿಸಿದ್ದು, ಸದ್ಯ ಅವರನ್ನು ರಕ್ಷಿಸಿ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ.

ಪ್ಲಾಟ್ ಫಾರಂ 3ರಲ್ಲಿ ನಮ್ಮ ಮೆಟ್ರೋ ರೈಲಿನಡಿ ಸಿಲುಕಿದ್ದ ವೀರೇಶ್ ನನ್ನು ಮೆಟ್ರೋ ಅಧಿಕಾರಿಗಳು ರಕ್ಷಣೆ ಮಾಡಿದ್ದಾರೆ. ಗಂಭೀರವಾಗಿ ಗಾಯಗೊಂಡಿದ್ದ ವೀರೇಶ್ ಅಂಬುಲೆನ್ಸ್‌ನಲ್ಲಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದ್ದು, ಸ್ಥಿತಿ ಗಂಭೀರವಾಗಿದೆ. ಚಿಕಿತ್ಸೆಗೆ ಸ್ಪಂದಿಸುತ್ತಿಲ್ಲ ಎಂದು ವೈದ್ಯಾಧಿಕಾರಿಗಳು ಹೇಳಿದ್ದಾರೆ. ಸದ್ಯ ವೀರೇಶ್‌ಗೆ ತಲೆಗೆ ತೀವ್ರವಾದ ಗಾಯ ಹಿನ್ನಲೆ ಎಮರ್ಜೆನ್ಸಿ ವಾರ್ಡ್ ನಲ್ಲಿ ಚಿಕಿತ್ಸೆ ಮುಂದುವರೆದಿದೆ. ಇನ್ನು ಘಟನೆ ತಿಳಿಯುತ್ತಿದ್ದಂತೆ ವೀರೇಶ್ ಕುಟುಂಬಸ್ಥರು ಆಸ್ಪತ್ರೆಗೆ ಓಡೋಡಿ ಬಂದಿದ್ದಾರೆ. ವೀರೇಶ್ ರಕ್ಷಣೆ ಬೆನ್ನಲ್ಲೆ ಅತ್ತ ಹಸಿರು ಮಾರ್ಗದಲ್ಲಿ ಸಂಚಾರ ಪುನಾರಂಭಗೊಳಿಸಲಾಗಿದೆ.




## ಲೋಕಾಯುಕ್ತ ಜನಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಆಕ್ಟೋಬರ್ 8ರ ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮುಂಡರಗಿ ಪುರಸಭೆಯಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಸಾರ್ವಜನಿಕರಿಂದ ದೂರು ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 67ನೇ ವರ್ಷದ ಪಾದಯಾತ್ರೆ ಇಂದಿನಿಂದ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೀಕ್ಷೇತ್ರ ಮಂತ್ರಾಲಯಕ್ಕೆ ಪಾದಯಾತ್ರೆ ಕೈಗೊಳ್ಳುತ್ತಿರುವ ಲಕ್ಷ್ಮೇಶ್ವರ ಶ್ರೀ ಕ್ಷೇತ್ರ ಮಂತ್ರಾಲಯ ಸಂಘದ ಪಾದಯಾತ್ರೆಗೀಗ 67ರ ಸಂವತ್ಸರ. 67ನೇ ವರ್ಷದ ಮಂತ್ರಾಲಯ ಪಾದಯಾತ್ರೆಯು ಅಕ್ಟೋಬರ್ 5ರ ಮಧ್ಯಾಹ್ನ 4 ಗಂಟೆಗೆ ಪಾದಯಾತ್ರಾ ಸಂಘದ ಮೂಲ ಕೇಂದ್ರವಾಗಿರುವ ಲಕ್ಷ್ಮೇಶ್ವರದಿಂದ ಹೊರಡಲಿದೆ.

ಲೋಕಕಲ್ಯಾಣಾರ್ಥವಾಗಿ ನಡೆಯುವ ಈ ಪಾದಯಾತ್ರೆಯು ಯಾತ್ರೆಯ ರೂವಾರಿ ದಿ. ವೈದ್ಯಬಾಬುರಾವ್ ಕುಲಕರ್ಣಿ ಅವರ ನಿವಾಸದಿಂದ ಪ್ರಾರಂಭವಾಗಿ, ಮೆರವಣಿಗೆಯ ಮೂಲಕ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಹಾಯ್ದು, ಶ್ರೀ ಸೋಮೇಶ್ವರ ದೇವರ ದರ್ಶನ ಪಡೆದು, ಸೋಮನಾಥಗೌಡ ಪಾಟೀಲಕುಲಕರ್ಣಿ ಅವರ ಮನೆಯಲ್ಲಿ ಸಂಜೆ 6 ಗಂಟೆಗೆ ಸಭೆ ಸೇರಲಿದ್ದು, ಈ ಸಭೆಯಲ್ಲಿ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ. ನೂರಾರು ಪಾದಯಾತ್ರಿಕರನ್ನು ಸಾರ್ವಜನಿಕರು ಬೀಳ್ಕೊಡಲಿದ್ದಾರೆ. ಪಾದಯಾತ್ರೆಯು ಅಕ್ಟೋಬರ್ 16ರಂದು ಶ್ರೀಕ್ಷೇತ್ರ ಮಂತ್ರಾಲಯವನ್ನು ತಲುಪಲಿದೆ ಎಂದು ಪಾದಯಾತ್ರಿಕ ಹಾಗೂ ಸಂಘಟಿಕ ಕೃಷ್ಣ ಕುಲಕರ್ಣಿ (ತಂಗೋಡ) ತಿಳಿಸಿದ್ದಾರೆ.

# ಮಾದಪ್ಪನ ಬೆಟ್ಟದಲ್ಲಿ ಮತ್ತೊಂದು ಹುಲಿ ಹತ್ಯೆ ಕೇಸ್: ಇಬ್ಬರು ಶಂಕಿತರು ವಶಕ್ಕೆ

■ವಿಜಯಸಾಕ್ಷಿ ಸುದ್ದಿ, ಚಾಮರಾಜನಗರ

ಮಾದಪ್ಪನ ಬೆಟ್ಟದಲ್ಲಿ ಮತ್ತೊಂದು ಹುಲಿ ಹತ್ಯೆ ಕೇಸ್ ಗೆ ಸಂಬಂಧಿಸಿದಂತೆ ಇಬ್ಬರು ಶಂಕಿತರನ್ನು ವಶಕ್ಕೆ ಪಡೆಯಲಾಗಿದೆ.

ಹುಲಿಯನ್ನು ಮೂರು ಭಾಗವಾಗಿ ಕತ್ತರಿಸಿ ಹತ್ಯೆ ಮಾಡಿರುವ ಪ್ರಕರಣದ ಇಬ್ಬರು ಶಂಕಿತರನ್ನ ಅರಣ್ಯಾಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ವಿಚಾರಣೆ ನಡೆದಿದ್ದು, ಶೀಘ್ರವೇ ಹುಲಿ ಹತ್ಯೆಗೆ ನೈಜ ಕಾರಣ ತಿಳಿಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಜೆಡಿಎಸ್ 'ಜಾತ್ಯತೀತ' ಪದವನ್ನು ಕೈಬಿಟ್ಟು ರಾಜಕಾರಣ ಮಾಡಲಿ: ಸಚಿವ ಪ್ರಿಯಾಂಕ್ ಖರ್ಗೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಜೆಡಿಎಸ್ ತನ್ನ ಹೆಸರಿನಲ್ಲಿರುವ ಜಾತ್ಯತೀತ ಪದವನ್ನು ಕೈಬಿಟ್ಟು ರಾಜಕಾರಣ ಮಾಡಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಮುಂದಿನ ಎಲ್ಲಾ ಚುನಾವಣೆಗಳಲ್ಲಿ ಬಿಜೆಪಿ ಜೊತೆ ಜೆಡಿಎಸ್ ಮೈತ್ರಿ ಮಾಡಿಕೊಳ್ಳಲಿದೆ ಎಂಬ ಮಾಜಿ ಪ್ರಧಾನಿ ದೇವೇಗೌಡರ ಹೇಳಿಕೆಗೆ ತಿರುಗೇಟು ಕೊಟ್ಟಿರುವ ಅವರು, "ಗೋಸುಂಬೆ ಬಣ್ಣವನ್ನು ಮಾತ್ರ ಬದಲಿಸುತ್ತದೆ. ಆದರೆ ಜೆಡಿಎಸ್ ಬಣ್ಣವನ್ನು ಮಾತ್ರವಲ್ಲ, ಸಿದ್ಧಾಂತವನ್ನು, ಮಾತುಗಳನ್ನೂ ಬದಲಿಸುವ ಮೂಲಕ ತನ್ನ ನಿಜ ಬಣ್ಣವನ್ನು ಅನಾವರಣಗೊಳಿಸಿದೆ" ಎಂದಿದ್ದಾರೆ.

"ಸಂಘವೆಂದರೆ 'ಸದಾನಂದ'ದ ಪರಿವಾರ ಎಂದು ಆರೋಪಿಸಿದ್ದವರು, ಇಂದು ಸಂಘದ ಸಹವಾಸದಲ್ಲೇ ಸದಾ ಆನಂದವಿದೆ ಎನ್ನುತ್ತಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ಕುಟುಕಿದ್ದಾರೆ.

ಶುಕ್ರವಾರ (ಅ.3) ಬೆಂಗಳೂರಿನ ಜೆಡಿಎಸ್ ಕಚೇರಿ ಜೆ.ಪಿ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ್ದ ದೇವೇಗೌಡರು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಐದು ಮಹಾನಗರ ಪಾಲಿಕೆ, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಮುಂದಿನ ವಿಧಾನಸಭೆ ಚುನಾವಣೆಗಳಲ್ಲೂ ಬಿಜೆಪಿ-ಜೆಡಿಎಸ್ ಮೈತ್ರಿ ಮುಂದುವರೆಯುತ್ತದೆ ಎಂದು ತಿಳಿಸಿದ್ದಾರೆ.

ಪ್ರಧಾನಮಂತ್ರಿ ಮೋದಿ ಅವರೊಂದಿಗಿನ ಒಡನಾಟದಲ್ಲಿ ಯಾವುದೇ ಬದಲಾವಣೆ ಇಲ್ಲ. ನನ್ನ ಬಗ್ಗೆ ಪ್ರಧಾನಿಯವರು ಒಂದೇ ಒಂದು ಮಾತನ್ನೂ ಲಘುವಾಗಿ ಆಡಿಲ್ಲ. ಎರಡೂ ಪಕ್ಷಗಳ ನಡುವಿನ ಸಂಬಂಧ ಚೆನ್ನಾಗಿದೆ ಎಂದಿದ್ದಾರೆ.

## ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಗಂಜಿಗಟ್ಟಿ ಶ್ರೀಗಳ ಅಭಿಮತ

# ಶರಣರ ಚಿಂತನೆಗಳು ಸದಾಕಾಲ ಪ್ರಸ್ತುತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶರಣಾಗತಿಯ ಭಾವ ಬರದೆ ಇದ್ದರೆ ಶರಣರಾಗುವದು ಸಾಧ್ಯವಿಲ್ಲ. ಶರಣರು ಎಂದರೆ ಅರಿವು ಮತ್ತು ಆಚಾರ ಒಂದಾದವರು. ಅಂತಹ ಶರಣರ ಚಿಂತನೆಗಳು ಸದಾ ಕಾಲಕ್ಕೂ ಪ್ರಸ್ತುತವಾಗಿದ್ದು, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವದು ಅವಶ್ಯವಾಗಿದೆ ಎಂದು ಗಂಜಿಗಟ್ಟಿ ಚರಮೂರ್ತೇಶ್ವರಮಠದ ಡಾ. ವೈಜನಾಥ ಶಿವಲಿಂಗೇಶ್ವರ ಮಹಾಸ್ವಾಮಿಗಳು ನುಡಿದರು.



ಅವರು ಶುಕ್ರವಾರ ಪಟ್ಟಣದ ಶ್ರೀ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶರಣ ಸಾಹಿತ್ಯ ಪರಿಷತ್ತು ಮತ್ತು ಕದಳಿ ಮಹಿಳಾ ವೇದಿಕೆ ಇವುಗಳ ಆಶ್ರಯದಲ್ಲಿ ದತ್ತಿದಾನಿಗಳಾದ ಚಿದಾನಂದಯ್ಯ ಹಿರೇಮಠ ಮತ್ತು ವಿಜಯಕುಮಾರ ಹಿರೇಮಠ ಅವರು ನೀಡಿದ ಲಿಂ. ಶರಣ ಸಿದ್ದರಾಮದೇವರು ಹಿರೇಮಠ ಅವರ ಹೆಸರಿನಲ್ಲಿ ದತ್ತಿ ಉಪನ್ಯಾಸ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು. ಶರಣರು ವಾಸ್ತವವಾದಿ ಗಳಾಗಿರುವಂತೆ ವಿಜ್ಞಾನಿಗಳೂ ಹೌದು. ಹಾಗಾಗಿ ಅವರು ವೇದ, ಶಾಸ್ತ್ರ, ಪುರಾಣ, ಆಗಮಗಳಿಂದ ದೂರವಿದ್ದವರು. ಶರಣರ ಇಂದ್ರಿಯ, ಮನಸ್ಸು, ಬುದ್ಧಿಯ ಚಿಂತನ ಮಂಥನದ ನಿಕಷಕ್ಕೆ ಒಳಪಟ್ಟು ಹೊರಬಂದ ಅಮೃತ ನುಡಿಗಳು ಇಂದಿಗೂ ಪ್ರಸ್ತುತವಾಗಿದ್ದು, ಅವುಗಳನ್ನು ಅಳವಡಿಸಿಕೊಳ್ಳುವ ಕಾರ್ಯವಾಗಬೇಕಾಗಿದೆ. ಲಿಂ. ಸಿದ್ದರಾಮದೇವರು ಧಾರ್ಮಿಕ ಚಿಂತನೆಯ ಜೊತೆಗೆ ಸಾಮಾಜಿಕ ಚಿಂತನೆಯನ್ನು ಹೊಂದಿದ್ದರು. ಸದಾ ಒಳ್ಳೆಯತನಕ್ಕಾಗಿ ಅವರ ಜೀವನ ತುಡಿಯುತ್ತಿತ್ತು ಎಂದು ನುಡಿದರು. ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮಾತನಾಡಿ, ಲಿಂ. ಸಿದ್ದರಾಮದೇವರು ಹಿರೇಮಠ ಅಪರೂಪದ ವ್ಯಕ್ತಿತ್ವ ಹೊಂದಿದ್ದ ಶರಣರಾಗಿದ್ದರು. ಕುಟುಂಬದ ನಿರ್ವಹಣೆಯ ಜೊತೆ ಸಮಾಜದಲ್ಲಿನ ಅಂಕು-ಡೊಂಕುಗಳನ್ನು ತಿದ್ದುವ ಕಾಯಕ ಮಾಡಿದ್ದರು ಎಂದರು. ಶರಣರ ಚಿಂತನೆಗಳ ಕುರಿತು ಪ್ರೊ. ಸೋಮಶೇಖರ ಕೆರಿಮನಿ ಉಪನ್ಯಾಸ ನೀಡಿದರು. ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಬಸವರಾಜ ಬಾಳೇಶ್ವರಮಠ, ವಿಜಯಪುರ ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಡಾ. ಉಷಾದೇವಿ ಹಿರೇಮಠ, ತಾಲೂಕಾ ಶಸಾಪ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ, ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ನಿರ್ಮಲಾ ಅರಳಿ, ದತ್ತಿ ದಾನಿಗಳಾದ ಚಿದಾನಂದಯ್ಯ ಹಿರೇಮಠ ಮತ್ತು ವಿಜಯಕುಮಾರ ಹಿರೇಮಠ ಮುಂತಾದವರಿದ್ದರು. ಬಸವರಾಜ ಸಂಗಪ್ಪಶೆಟ್ಟರ ಸ್ವಾಗತಿಸಿದರು, ರೇಖಾ ವಡಕಣ್ಣವರ ನಿರೂಪಿಸಿದರು. ಎಂ.ಕೆ. ಕಳ್ಳಿಮಠ ವಂದಿಸಿದರು.

ನೇತೃತ್ವ ವಹಿಸಿದ್ದ ಬನ್ನಿಕೊಪ್ಪ ಜಪದಕಟ್ಟಿಮಠದ ಡಾ. ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಮನುಷ್ಯನ ಶಾಂತಿ, ನೆಮ್ಮದಿ ಬದುಕು, ಉನ್ನತಿಗೆ ಶರಣರ ತತ್ವ ಚಿಂತನೆಗಳು ಅವಶ್ಯವಾಗಿವೆ. ಈ ನಿಟ್ಟಿನಲ್ಲಿ ಮನೆ-ಮನಗಳಿಗೆ ಶರಣರ ಸಂದೇಶ ತಲುಪಬೇಕಿದೆ, ಶರಣರ ಚಿಂತನೆಗಳು ಒಂದೇ ಸಮಾಜಕ್ಕೆ ಸೀಮಿತವಾಗದೇ ಎಲ್ಲವರ್ಗವನ್ನು ಪ್ರತಿನಿಧಿಸುವಲ್ಲಿ ತಮ್ಮದೇ ಆದ ಕೊಡುಗೆ ನೀಡುತ್ತ ಬಂದಿವೆ. ಈ ನಿಟ್ಟಿನಲ್ಲಿ ಲಿಂ. ಶರಣ ಸಿದ್ದರಾಮದೇವರು ತಮ್ಮ ನಡೆನುಡಿಗಳ ಮೂಲಕ ನಾಡಿಗೆ ಒಳ್ಳೆಯ ಸಂದೇಶವನ್ನು ನೀಡುತ್ತಾ ಬರುತ್ತಿದ್ದರು. ಧಾರ್ಮಿಕ ಚಿಂತನೆಗಳ ಜೊತೆ ಮಠಾಧೀಶರನ್ನು, ಶಿವಾಚಾರ್ಯರ ಬಗ್ಗೆ ಸಮಾಜದಲ್ಲಿ ಉತ್ತಮ ಬಾಂಧವ್ಯ ಬೆಸೆಯುವಂತೆ ಮಾಡಿದ್ದರು ಎಂದರು.

# ಭಾರತವು ಸಂವಿಧಾನದ ಮೂಲಕ ಆಳಲ್ಪಡುತ್ತದೆ, ಬುಲ್ಡೋಜರ್ ನಿಯಮದಿಂದಲ್ಲ: ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತವು 'ಕಾನೂನಿನ ನಿಯಮ'ದಿಂದ ಆಳಲ್ಪಡುವ ದೇಶ, ಇಲ್ಲಿ ಆಡಳಿತವು ಸಂವಿಧಾನ ಮತ್ತು ಕಾನೂನಿನ ಮೂಲಕ ನಡೆಸಲ್ಪಡುತ್ತದೆ, ಅನಿಯಂತ್ರಿತತೆ ಅಥವಾ ಅಧಿಕಾರದಿಂದಲ್ಲ ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಒತ್ತಿ ಹೇಳಿದರು.

ಮಾರಿಷಸ್‌ನಲ್ಲಿ ನಡೆದ "ರೂಲ್ ಆಫ್ ಲಾ ಸ್ಮಾರಕ ಉಪನ್ಯಾಸ" ದಲ್ಲಿ ಮಾತನಾಡಿದ ಸಿಜೆಐ ಗವಾಯಿ, ಅಧಿಕಾರದಲ್ಲಿರುವವರು ಸೇರಿದಂತೆ ಪ್ರತಿಯೊಬ್ಬ ವ್ಯಕ್ತಿಯು ಕಾನೂನನ್ನು ಪಾಲಿಸಬೇಕು ಎಂದು ಹೇಳಿದರು.

# ಆರ್‌ಎಸ್‌ಎಸ್ ವಿಜಯದಶಮಿ ಪಥಸಂಚಲನ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಂಘ ಶತಾಬ್ದಿ ವರ್ಷದ ವಿಜಯದಶಮಿ ಪಥ ಸಂಚಲನವು ಪಟ್ಟಣದ ಕೆಂಪೇಶ್ವರ ದೇವಸ್ಥಾನದಿಂದ ಪ್ರಾರಂಭವಾಗಿ, ಮಟ್ಟೇರ ಓಣಿ, ಕೊಟ್ಟೂರು ರಸ್ತೆಯ ಮೂಲಕ ತೆಗ್ಗಿನ ಮಠ ಮುಂಭಾದಲ್ಲಿ ಸಾಗಿ ಹಳೇ ಬಸ್ಟಾಂಡ್ ಮೂಲಕ ಐಬಿ ವೃತ್ತದಲ್ಲಿ ಕೊನೆಗೊಂಡಿತು.

ಪಥ ಸಂಚಲನ ಸಾಗುವ ಪ್ರಮುಖ ಬೀದಿಯುದ್ದಕ್ಕೂ ಕೇಸರಿ ಬಾವುಟಗಳು ಕಂಗೊಳಿಸುತ್ತಿದ್ದವು. 500ಕ್ಕೂ ಅಧಿಕ ಗಣವೇಷಧಾರಿಗಳು ಪಥ ಸಂಚಲನದಲ್ಲಿ ಭಾಗವಹಿಸಿದ್ದರು. ಈ ವೇಳೆ ರಾಷ್ಟ್ರೀಯ ಸ್ವಯಂಸೇವಕ ಸಂಘದ ಜಿಲ್ಲಾ ವಿಭಾಗ ಕಾರ್ಯವಾರು ಕೇಶವ್ ಜೀ, ಪ್ರಾಂತ ಬೌದ್ಧಿಕ ಪ್ರಮುಖ ದುರುಗಣ್ಣನವರ್, ಜಿಲ್ಲಾ ಕಾರ್ಯಕಾರಿಣಿ ಸತ್ಯನಾರಾಯಣ, ದಕ್ಷಿಣ ಪ್ರಾಂತ ದೋಸೇವಾ ಸಂಯೋಜಕ ಕುಮಾರಸ್ವಾಮಿ, ವಿಭಾಗ ಕುಟುಂಬ ಪ್ರಭೋದನ್ ಪ್ರಮುಖ ಕೃಷ್ಣಮೂರ್ತಿ, ತಾಲೂಕು ಕಾರ್ಯವಾಹಕ ಪಶುಪತಿ, ತಾಲೂಕು ಟೋಳಿ ಪ್ರಮುಖ ಮೌನೇಶ, ಗೌರಳ್ಳಿ ನಾಗರಾಜ, ಕೊಟ್ಟೂರು ದೇವರು, ಮಾಜಿ ಶಾಸಕ ಜಿ.ಕರುಣಾಕರ ರೆಡ್ಡಿ, ಶೇಖರಪ್ಪ, ಲೋಕೇಶ್, ಮುದುಕವ್ವನವರ ಶಂಕರ್, ಕಡೆಮನಿ ಸಂಗಮೇಶ್ ಮುಂತಾದವರಿದ್ದರು.

# ವಿದ್ಯಾರ್ಥಿ ಯಲ್ಲಾಲಿಂಗ ಸಾವು ಪ್ರಕರಣ: ಎಲ್ಲ 9 ಆರೋಪಿಗಳು ಖುಲಾಸೆ





■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ದಶಕದ ಹಿಂದೆ (2015ರಲ್ಲಿ) ನಡೆದಿದ್ದ ಕೊಪ್ಪಳ ಜಿಲ್ಲೆ ಕನಕಗಿರಿ ತಾಲೂಕಿನ ಹುಲಿಹೈದರ ಗ್ರಾಮದ ವಿದ್ಯಾರ್ಥಿ ಯಲ್ಲಾಲಿಂಗ ಅವರ ಸಾವಿನ ಪ್ರಕರಣದ ತೀರ್ಪನ್ನು ಕೊಪ್ಪಳದ ಜಿಲ್ಲಾ ನ್ಯಾಯಾಲಯ ಶುಕ್ರವಾರ (ಅಕ್ಟೋಬರ್ 3) ಪ್ರಕಟಿಸಿದೆ.

ಸೆಪ್ಟೆಂಬರ್ 24ರಂದು ಅಂತಿಮ ವಿಚಾರಣೆ ನಡೆಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಾಲಯ ಪ್ರಕಟಿಸಿದ್ದು, ಸಚಿವ ಶಿವರಾಜ್ ತಂಗಡಗಿ ಅವರ ಆಪ್ತ ಹನುಮೇಶ್ ನಾಯಕ್ ಸೇರಿದಂತೆ ಪ್ರಕರಣದ ಎಲ್ಲಾ 9 ಆರೋಪಿಗಳನ್ನು ಖುಲಾಸೆಗೊಳಿಸಿದೆ.

ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಆರೋಪಿಗಳ ಪರ ವಕೀಲರು, "ಒಟ್ಟು 9 ಜನರ ವಿರುದ್ಧ ಸಿಐಡಿ ದೋಷಾರೋಪ ಪಟ್ಟಿ ಸಲ್ಲಿಸಿತ್ತು. ನ್ಯಾಯಾಲಯ 76 ಸಾಕ್ಷಿಗಳನ್ನು ವಿಚಾರಣೆ ನಡೆಸಿತ್ತು. ಈ ಪೈಕಿ 56 ಜನರು ಪ್ರಾಸಿಕ್ಯೂಷನ್ ಪರವಾಗಿ ಸಾಕ್ಷ್ಯ ನುಡಿದಿಲ್ಲ ಎಂಬುವುದನ್ನು ನ್ಯಾಯಾಲಯ ಪರಿಗಣಿಸಿದೆ ಎಂದಿದ್ದಾರೆ.

ಮುಂದುವರಿದು, ಯಲ್ಲಾಲಿಂಗ ಮಾನಸಿಕ ಖಿನ್ನತೆಯಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಅವರ ಅಣ್ಣ ವೀರಭದ್ರಪ್ಪ ಅವರು ಪೊಲೀಸರ ಮುಂದೆ ಕೊಟ್ಟಿರುವ ಲಿಖಿತ ಹೇಳಿಕೆ ಮತ್ತು ಯಲ್ಲಾಲಿಂಗನ ಮೃತದೇಹದ ಮೇಲಿನ ಗಾಯಗಳು ರೈಲು ಡಿಕ್ಕಿಯಿಂದ ಆಗಿರುವ ಸಾಧ್ಯತೆ ಹೆಚ್ಚಿದೆ ಎಂದು ಮರಣೋತ್ತ ಪರೀಕ್ಷೆ ನಡೆಸಿದ ವೈದ್ಯರು ಕೊಟ್ಟಿರುವ ವರದಿಯನ್ನು ನ್ಯಾಯಾಲಯ ಪರಿಗಣನೆಗೆ ತೆಗೆದುಕೊಂಡಿದೆ ಎಂದು ಹೇಳಿದ್ದಾರೆ.

ಈ ಪ್ರಕರಣದಲ್ಲಿ ಹನುಮೇಶ್ ನಾಯಕ್ ಅವರ ಪಾತ್ರ ಇಲ್ಲ ಎಂಬುವುದು ಗೊತ್ತಿದ್ದರೂ, ಅವರನ್ನು ಸುಖಾಸುಮ್ಮನೆ ಬಂಧಿಸಿ ನ್ಯಾಯಾಂಗ ಬಂಧನದಲ್ಲಿ ಇಡಲಾಗಿತ್ತು. ಇದರ ಹಿಂದೆ ರಾಜಕೀಯ ಷಡ್ಯಂತ್ರ ಇತ್ತು ಎಂದು ಆರೋಪಿಸಿದ್ದಾರೆ.

ಹನುಮೇಶ್ ನಾಯಕ್ ಮಾತನಾಡಿ, "ಶಿವರಾಜ್ ತಂಗಡಗಿ ಅವರನ್ನು ಸಚಿವ ಸ್ಥಾನದಿಂದ ಕೆಳಗಿಳಿಸಬೇಕು ಎಂದು ನನ್ನನ್ನು ಬಂಧಿಸಿದ್ದರು. ಕಳೆದ 10 ವರ್ಷಗಳಿಂದ ನಾವು ಆರೋಪ ಹೊತ್ತಿದ್ದೆವು. ನ್ಯಾಯಾಲಯದ ತೀರ್ಪಿನಿಂದ ನಾವು ನಿರ್ದೋಷಿಗಳು ಎಂಬುವುದು ಖಚಿತವಾಗಿದೆ.

# ಶೆಟ್ಟೆಮ್ಮ ದೇವಿ ಮಹಾದ್ವಾರದ ಭೂಮಿಪೂಜೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಧಾರ್ಮಿಕ ಕಾರ್ಯಗಳಿಂದ ಪುಣ್ಯ ಲಭಿಸುತ್ತದೆ. ಇಂತಹ ಕಾರ್ಯಗಳು ಸಮಾಜದಲ್ಲಿ ಶಾಂತಿ, ನೆಮ್ಮದಿ ತರುತ್ತವೆ ಮತ್ತು ಸಮಾಜದಲ್ಲಿ ಅನಾಚಾರ ತಡೆಯಲು ಸಹಕಾರಿಯಾಗುತ್ತವೆ. ಜೊತೆಗೆ, ಇವುಗಳು ಮನಸ್ಸಿಗೆ ಮುದ ನೀಡುತ್ತವೆ ಎಂದು ಅಬ್ಬಿಗೇರಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲಲಿತಾ ರಾಠೋಡ ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದಲ್ಲಿ ಶ್ರೀ ಶೆಟ್ಟೆಮ್ಮದೇವಿ ಮಹಾದ್ವಾರದ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಸಮಾಜದ ಒಳಿತಿಗಾಗಿ, ಆಚಾರ-ವಿಚಾರಗಳಿಗೆ ಪ್ರೋತ್ಸಾಹ ನೀಡಲು ಧಾರ್ಮಿಕ ಕಾರ್ಯಗಳು ಅತ್ಯಗತ್ಯವಾಗಿವೆ. ಯಾವುದೇ ಧರ್ಮದ ಆಚರಣೆಗಳು ಮಾನವನ ಒಳಿತಿಗಾಗಿ ಇರುತ್ತವೆ ಎಂದರು. ಉಪಾಧ್ಯಕ್ಷೆ ಜ್ಯೋತಿ ತೆಗ್ಗಿನಕೇರಿ, ಅಕ್ಕಮ್ಮ ಡೊಳ್ಳಿನ, ಚನ್ನಮ್ಮ ತಳವಾರ, ಸುರೇಶ ನಾಯ್ಕರ, ಸಚಿನ ಪಾಟೀಲ, ಬಸವರಾಜ ಕಮ್ಮಾರ, ನೀಲಪ್ಪ ದ್ವಾಸಲ, ಹನಮಂತಪ್ಪ ದ್ವಾಸಲ, ಅಂದಪ್ಪ ವೀರಾಪೂರ, ಮಂಜುನಾಥ ಅಂಗಡಿ, ಬಸಪ್ಪ ಜಂತ್ಲಿ, ಭೋವಿ ಸಮಾಜದ ಅಧ್ಯಕ್ಷ ಬಾಲಪ್ಪ ಬಂಡಿವಡ್ಡರ, ಮಾರುತಿ ಬಂಡಿವಡ್ಡರ, ತಿಮ್ಮಣ್ಣ ಬಂಡಿವಡ್ಡರ, ಬಾಲಚಂದ್ರ ಬಂಡಿವಡ್ಡರ, ಹನುಮಂತ ಸೂಳಿಕೇರಿ ಇತರರಿದ್ದರು.

# ಗೋಪುರ ನಿರ್ಮಾಣಕ್ಕೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಂಭಾಪೂರ ರಸ್ತೆಯಲ್ಲಿರುವ ಶ್ರೀ ಪಂಡಿತ ಪುಟ್ಟರಾಜ ನಗರದ ಶ್ರೀ ಸಿದ್ಧಿವಿನಾಯಕ ದೇವಸ್ಥಾನ ಟ್ರಸ್ಟ್ ಕಮಿಟಿ ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಶ್ರೀ ಸಿದ್ಧಿವಿನಾಯಕ ದೇವಸ್ಥಾನ ಹಾಗೂ ಶ್ರೀ ಮಾರುತಿ ದೇವಸ್ಥಾನದ ನೂತನ ಗೋಪುರ ನಿರ್ಮಾಣಕ್ಕೆ ಗದುಗಿನ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಚಾಲನೆ ನೀಡಿದರು.



ಶ್ರೀ ಅನ್ನಪೂರ್ಣೇಶ್ವರಿ ಮಂದಿರದ ಧರ್ಮದರ್ಶಿಗಳಾದ ಪೂಜ್ಯಶ್ರೀ ಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ ಸಮ್ಮುಖ ವಹಿಸಿದ್ದರು. ಶ್ರೀ ಸಿದ್ಧಿವಿನಾಯಕ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಉಮೇಶಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಹಿರಿಯ ಸಾಹಿತಿ ಟಿ.ವಿ. ಮಾಗಳದ, ಗುತ್ತಿಗೆದಾರ ಆಂಜನೇಯ ಕಟಗಿ, ಎಸ್.ಆರ್. ಪಾಟೀಲ, ಬಿ.ಎಲ್. ತಮ್ಮನಗೌಡ್ರ, ಎಲ್.ಎಸ್. ಬೆಳವಟಗಿ, ಜಿ.ಡಿ. ಗೊರವರ, ಎಸ್.ಬಿ. ಮೇಟಿ, ಪಿ.ಜಿ. ಚವಡಿ, ಎಸ್.ವಿ. ಹಿರೇಮಠ, ಎಸ್.ಐ. ಪವಾಡಶೆಟ್ಟರ, ರಾಜಣ್ಣ ಗೌಡರ, ಬಿ.ಕೆ. ಸಪರದ, ಬಸಣ್ಣ ಶಲವಡಿ, ಬಾಪುಗೌಡ ಮಲ್ಲನಗೌಡರ, ಎಸ್.ಐ. ಮೇಟಿ, ಎಸ್.ಎಫ್. ಸಂಕಣ್ಣವರ, ಡಿ. ಚಿತ್ರಗಾರ, ಜಿ.ಎಸ್. ಸುಳ್ಳದ, ಎಚ್.ಎಫ್. ಪಾಟೀಲ, ಬಿ.ಎಸ್. ಹುಲಗೂರ, ಮಲ್ಲಪ್ಪ ಬೂಳಿ, ಎಸ್.ಎ. ಗದುಗಿನ, ವೈ.ಸಿ. ಕಲಬುರ್ಗಿ, ಮಂಜುನಾಥ ಕುರಿಯವರ, ಎಂ.ಸಜ್ಜನ, ವಿ.ವಿ. ಕೌತಾಳ, ಮಂಡಲಗೇರಿ, ಬಿ.ಎಚ್. ರೋಣದ, ರಮೇಶ ಪಾಟೀಲ, ವಿ.ಬಿ. ಮರಿಗೌಡರ, ಮಲ್ಲಿಕಾರ್ಜುನಗೌಡ ಬಂಡಿ, ಬಸಯ್ಯ ಆರಾಧ್ಯಮಠ, ಶಿವಪ್ಪ ಕಂಕಣಮೇಟಿ, ಪ್ರಕಾಶ ಭಂಡಿ, ಸೋಮು ಅಂಗಡಿ, ಕೆ.ಎ. ಉಪ್ಪಿನ, ಡಿ.ಜಿ. ಬಳ್ಳೊಳ್ಳಿ, ರಮೇಶ ಕಾಂಬಳೆ, ಸೂರ್ಯವಂಶಿ, ಗಣೇಶ ಬನ್ನಿಗೋಳ, ಎ.ದೊಡ್ಡಕುಂಡಿ ಮುಂತಾದವರು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ಶ್ರೀದೇವಿಯ ಪುರಾಣ ಮಂಗಳ ಮತ್ತು ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ನಂತರ ಪ್ರಸಾದಸೇವೆ ಜರುಗಿತು. ಶ್ರೀ ಸಿದ್ಧಿವಿನಾಯಕ ದೇವಸ್ಥಾನ ಟ್ರಸ್ಟ್ ಕಮಿಟಿ ಪದಾಧಿಕಾರಿಗಳು ಹಾಗೂ ಪುಟ್ಟರಾಜ ನಗರದ ಸಮಸ್ತ ನಾಗರಿಕರು ಉಪಸ್ಥಿತರಿದ್ದರು.

# ರೈತ ಸಂಘದ ಮಹಿಳಾ ಉಪಾಧ್ಯಕ್ಷರ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಶ್ರೀ ಡಾ. ಪಂಡಿತ ಪುಟ್ಟರಾಜ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಎಂ.ಪಿ. ಮುಳಗುಂದ ಅವರ ನೇತೃತ್ವದಲ್ಲಿ ನಗರದ ಪ್ರವಾಸಿ ಮಂದಿರದಲ್ಲಿ ಜರುಗಿದ ಸಭೆಯಲ್ಲಿ ಗದಗ ಜಿಲ್ಲಾ ಮಹಿಳಾ ಉಪಾಧ್ಯಕ್ಷರನ್ನಾಗಿ ಆರಾಧನಾ ಜಿ.ಬಣಕಾರರನ್ನು ನೇಮಕ ಮಾಡಿ ಆದೇಶ ಪತ್ರ ನೀಡಲಾಯಿತು.

ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಅಶೋಕ ಬಶೆಟ್ಟಿ, ಗದಗ ಜಿಲ್ಲಾಧ್ಯಕ್ಷ ಮಂಜುನಾಥ ಗುಡದೂರ, ಜಿಲ್ಲಾ ಕಾರ್ಯದರ್ಶಿ ಶಂಭು ಅಂಗಡಿ, ಚನ್ನಪ್ಪ ಕರಬಸಪ್ಪ ಬಣ್ಣಪ್ಪನವರ, ಪುಷ್ಪಾ ಬಿಜಾಪುರ, ಆದಿತ್ಯ, ಸೃಷ್ಟಿ ಸಂಕುಲ ಸಂಸ್ಥೆ ಗದಗ, ಆರಾಧ್ಯ ಹಿರೇಮಠ, ಈರಣ್ಣ, ದೃಷ್ಟಿ, ವಿನುತಾ, ಸುರಭಿ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಗಮನ ಸೆಳೆದ ದಸರಾ ಮೆರವಣಿಗೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ವಿಜಯ ದಶಮಿ ಹಬ್ಬದ ದಿನ ಇಲ್ಲಿಯ ದಂಡಿನ ದುರ್ಗಾದೇವಿಯ ದಸರಾ ದರ್ಬಾರ್ ಮೆರವಣಿಗೆಯು ಜನಮನ ಸೆಳೆಯಿತು. ದುರ್ಗಾದೇವಿ ದೇವಸ್ಥಾನದಿಂದ ದೇವಿ ಮೂರ್ತಿಯನ್ನು ಹೊತ್ತ ವಾಹನದ ಮೆರವಣಿಗೆ ಪ್ರಮುಖ ಬೀದಿಗಳಲ್ಲಿ ಸಾಗಿತು.



ವಾಹನದಲ್ಲಿ ನವ ದುರ್ಗೆಯ ಅವತಾರದ ವೇಷ-ಭೂಷಣ ಧರಿಸಿದ ಬಾಲಕಿಯರ ಮೆರವಣಿಗೆಯು ಗಮನ ಸೆಳೆಯಿತು. ಯುವಕರ ಡೊಳ್ಳು ಕುಣಿತ ಆಕರ್ಷಣೀಯವಾಗಿತ್ತು. ಕಲ್ಮಠದಲ್ಲಿ ಮುಕ್ತಾಯಗೊಂಡ ಮೆರವಣಿಗೆಯ ನಂತರ ವಿಧಿ-ವಿಧಾನಗಳೊಂದಿಗೆ ಬನ್ನಿ ಮುಡಿಯುವ ಕಾರ್ಯಕ್ಕೆ ಚಾಲನೆ ನೀಡಲಾಯಿತು.

ಕಳೆದ 9 ದಿನಗಳಿಂದ ನಡೆದ ನವರಾತ್ರಿಯ ದೇವಿಯ ಪುರಾಣದ ಪ್ರವಚನವನ್ನು ಕೊಟ್ರಯ್ಯಶಾಸ್ತ್ರಿಗಳು ನರಗುಂದಮಠ ಅವರು ಮುಕ್ತಾಯಗೊಳಿಸಿದರು. ಮಾನಪ್ಪ ಬಡಿಗೇರ ಪುರಾಣ ಪಠಣ ಮಾಡಿದರು. ಮಂಜುನಾಥ ಗರ್ಜಪ್ಪನವರ, ಈರಪ್ಪ ಕರಿಯಲ್ಲಪ್ಪನವರ ಸಂಗೀತ ಸೇವೆ ನೀಡಿದರು. ಸೇವೆ ಸಲ್ಲಿಸಿದ ಮಹನೀಯರನ್ನು ಸನ್ಮಾನಿಸಲಾಯಿತು. ನಂತರ ಅನ್ನ ಸಂತರ್ಪಣೆ ನಡೆಯಿತು.

ಸಮಿತಿಯ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ, ಉಪಾಧ್ಯಕ್ಷ ಎಂ.ಎಸ್. ಉಮಚಗಿ, ಶಿವಪ್ಪ ಸಜ್ಜನರ, ನಜೀರಅಹ್ಮದ ಕಿರಿಟಗೇರಿ, ವೀರಯ್ಯ ಗಂಧದ, ಮಂಜುನಾಥ ಪುರದ, ಈರಪ್ಪ ಅಜಿನಾಳ, ಪ್ರೇಮಾ ಮಟ್ಟಿ, ನೀಲವ್ವ ವಡ್ಡರ, ಪಾರಮ್ಮ ಮುಸ್ಕಿನಭಾವಿ ಸೇರಿದಂತೆ ಗಣ್ಯರು, ಹಿರಿಯರು, ಯುವಕರು ಪಾಲ್ಗೊಂಡಿದ್ದರು.



ಗದಗ ನಗರದ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವದ ಅಂಗವಾಗಿ ರೇಣುಕಾಚಾರ್ಯ ಮಂದಿರದಿಂದ ಶ್ರೀಚಂದ್ರಶೇಖರ ದೇವರ ಸಾನ್ನಿಧ್ಯದಲ್ಲಿ, ಅಡವೀಂದ್ರ ಸ್ವಾಮಿಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಸಮ್ಮುಖ ಹಾಗೂ ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ ನೇತೃತ್ವದಲ್ಲಿ ಶ್ರೀಅನ್ನಪೂರ್ಣೇಶ್ವರಿ ರಥೋತ್ಸವದ ಕಳಸದ ಪೂಜೆ ನೆರವೇರಿಸಿ ಶ್ರೀಮಠಕ್ಕೆ ಭವ್ಯ ಮೆರವಣಿಗೆಯ ಮೂಲಕ ತರಲಾಯಿತು.

# ಬಹಿರಂಗ ಹರಾಜು

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯಿತಿ ಆವರಣದಲ್ಲಿನ ಸರಕಾರಿ ವಾಹನ ಸಂಖ್ಯೆ ಕೆಎ-26, ಜಿ-0339 ಮತ್ತು ಕೆಎ-26, ಜಿ-0387 ಈ ಎರಡು ವಾಹನ ಹರಾಜು ಮೂಲಕ ಯಥಾಸ್ಥಿತಿಯಲ್ಲಿ 16/10/2025ರಂದು ಬೆಳಿಗ್ಗೆ 11 ಗಂಟೆಗೆ ಜಿ.ಪಂ ಸಭಾಂಗಣದಲ್ಲಿ ಬಹಿರಂಗ ಹರಾಜು ಮಾಡಲಾಗುವುದು. ಆಸಕ್ತರು 5000 ಸಾವಿರ ರೂ ಡಿಡಿಯೊಂದಿಗೆ ಮುಖ್ಯ ಕಾರ್ಯ ನಿರ್ವಾಹಕಧಿಕಾರಿಗಳು, ಜಿಲ್ಲಾ ಪಂಚಾಯಿತಿ ಗದಗ ಇವರ ಹೆಸರಿನಲ್ಲಿ ಪಡೆದು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯಿತಿ ಕಛೇರಿ ವೇಳೆಯಲ್ಲಿ (ಮೊ-9008051309) ಸಂಪರ್ಕಿಸಬಹುದಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ವಿಶ್ವ ರೇಬಿಸ್ ದಿನಾಚರಣೆ, ವಿಶ್ವ ಹೃದಯ ದಿನಾಚರಣೆ

# ರೇಬಿಸ್ ಲಸಿಕೆಯ ಬಗ್ಗೆ ಭಯ ಬೇಡ

**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ವಿಶ್ವ ರೇಬಿಸ್ ದಿನ ಹಾಗೂ ವಿಶ್ವ ಹೃದಯ ದಿನದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಣಾ ಘಟಕ, ಜಿಲ್ಲಾ ಮಾಹಿತಿ ಶಿಕ್ಷಣ ಮತ್ತು ಸಂವಹನ ವಿಭಾಗ, ತಾಲೂಕ ಆರೋಗ್ಯಾಧಿಕಾರಿಗಳ ಕಚೇರಿ ಮುಂಡರಗಿ ಹಾಗೂ ಮುಂಡರಗಿಯ ಶ್ರೀ ಜಗದ್ಗುರು ತೋಂಟ-ದಾರ್ಯ ಸರಕಾರಿ ಪ್ರಥಮದರ್ಜೆ ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ಆಚರಿಸಲಾಯಿತು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ್ ಮಾತನಾಡಿ, ರೇಬಿಸ್ ಒಂದು ವೈರಾಣುವಿನಿಂದ ಹರಡುವ ಮಾರಕ ಖಾಯಿಲೆಯಾಗಿದ್ದು, ಇದರ ತಡೆಗಟ್ಟುವಿಕೆ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಈ ರೋಗವನ್ನು ಸೋಲಿಸುವಲ್ಲಿ ಪ್ರಗತಿಯನ್ನು ಸಾಧಿಸಲು ಈ ದಿನವನ್ನು ವಾರ್ಷಿಕವಾಗಿ



ಆಚರಿಸಲಾಗುತ್ತದೆ. ಭಾರತದಲ್ಲಿ ವರ್ಷಕ್ಕೆ 20 ಸಾವಿರ ಸಾವುಗಳು ರೇಬಿಸ್‌ನಿಂದ ಆಗುತ್ತಿವೆ. ಕಾರಣ ರೇಬಿಸ್ ಲಸಿಕೆಯ ಬಗ್ಗೆ ಭಯ ಬಿಟ್ಟು ಎಲ್ಲರೂ ಲಸಿಕೆಯನ್ನು ಹಾಕಿಸಿಕೊಳ್ಳಬಹುದು ಎಂದು ತಿಳಿಸಿದರು.

ಪ್ರಭಾರಿ ಪ್ರಾಂಶುಪಾಲ ಮಹೇಶ ಬದನಿಕಾಯಿ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಹೃದಯದ ಆರೋಗ್ಯವನ್ನು ಸಧೃಡವಾಗಿಟ್ಟುಕೊಳ್ಳಲು ಪ್ರತಿದಿನ ವ್ಯಾಯಾಮ, ಯೋಗಾಸನ, ಪೌಷ್ಠಿಕ ಆಹಾರ ಹಾಗೂ ಉತ್ತಮ ಆರೋಗ್ಯಕ್ಕಾಗಿ ಕನಿಷ್ಠ 7ರಿಂದ 8 ಗಂಟೆಯವರೆಗೆ ಆರೋಗ್ಯಕರ ನಿದ್ರೆ ಅವಶ್ಯಕವಾಗಿರುತ್ತದೆ ಎಂದು ತಿಳಿಸಿದರು.

ತಾಲೂಕಾ ಆರೋಗ್ಯಾಧಿಕಾರಿ ಡಾ. ಲಕ್ಷ್ಮಣ ಪೂಜಾರ ಮಾತನಾಡಿ, ವಿಶ್ವ ಹೃದಯ ದಿನದಂದು ಪರಿಣಾಮಕಾರಿಯಾಗಿ ಜನರಲ್ಲಿ ಜಾಗೃತಿಯನ್ನು ಮೂಡಿಸುವುದು ನಮ್ಮೆಲ್ಲರ ಮುಖ್ಯ ಕರ್ತವ್ಯವಾಗಿದೆ. ಆಧುನಿಕ ಜೀವನ ಶೈಲಿ, ಧೂಮಪಾನ, ಮಧುಮೇಹ, ಅಧಿಕ ರಕ್ತದೊತ್ತಡ, ಬೊಜ್ಜು ಮತ್ತು ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಇವೆಲ್ಲವುದರ ಕಾರಣಗಳಿಂದಾಗಿ ಹೃದಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವುದು ಎಚ್ಚರಿಕೆಯ ಗಂಟೆಯಾಗಿದೆ. ಇತ್ತೀಚಿನ ದಿನಗಳಲ್ಲಿ ಹೃದ್ರೋಗದ ಪ್ರಕರಣಗಳು ಹೆಚ್ಚಾಗುತ್ತಿದ್ದು, ಯುವ ಜನರೇ ಹೆಚ್ಚಿನ ಸಂಖ್ಯೆಯಲ್ಲಿ ಹಠಾತ್ತಾಗಿ ಹೃದಯಾಘಾತ, ಹೃದಯ ಸ್ತಂಭನಕ್ಕೀಡಾಗಿ ಜೀವ ಕಳೆದುಕೊಳ್ಳುತ್ತಿದ್ದಾರೆ. ಹೃದ್ರೋಗಳಿಗೆ ಉಂಟಾಗುತ್ತಿರುವ ಜೀವ ಹಾನಿ ಪ್ರಮಾಣವನ್ನು ತಗ್ಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಪುನೀತ್ ರಾಜ್‌ಕುಮಾರ್ ಹೃದಯ ಜ್ಯೋತಿ (ಖಊಇಒಖ) ಮುಂತಾದ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದರು.

ಉಪನ್ಯಾಸಕರಾದ ಸಂತೋಷ ಕಾಗನೂರ, ಮಂಜುನಾಥ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ರೂಪಸೇನ್ ಚವ್ಹಾಣ, ಜಿಲ್ಲಾ ಸಮೀಕ್ಷಣಾ ಘಟಕದ ಡಾ. ರವಿ ಕಡಗಾವಿ, ಎಪಿಡೆಮಿಯೋಲಾಜಿಸ್ಟ್ ಡಾ. ಪ್ರವೀಣ ನಿಡಗುಂದಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು, ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿಯ ಅಧಿಕಾರಿಗಳು ಹಾಗೂ ಪ್ರಾ.ಆ. ಕೇಂದ್ರ ಹಿರೇವಡ್ಡಟ್ಟಿಯ ಅಧಿಕಾರಿಗಳು ಭಾಗವಹಿಸಿದ್ದರು.

ಈಶ್ವರಿ ಬಡಿಗೇರ ಪ್ರಾರ್ಥಿಸಿದರು. ಮುಂಡರಗಿ ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಎಮ್.ಎಸ್. ಸಜ್ಜನರ ನಿರೂಪಿಸಿದರು. ಎಮ್.ಎಸ್. ರಬ್ಬನಗೌಡ್ರ ವಂದಿಸಿದರು.

> ಸಾಮಾನ್ಯವಾಗಿ ರೇಬಿಸ್ ಸೋಂಕು ಹೊಂದಿದ ಪ್ರಾಣಿಗಳಲ್ಲಿ ನಾಯಿಗಳಿಂದ ಶೇ. 97ರಷ್ಟು, ಬೆಕ್ಕುಗಳಿಂದ ಶೇ. 2 ಹಾಗೂ ಇತರೇ ಪ್ರಾಣಿಗಳಿಂದ ಶೇ. 1ರಷ್ಟು ರೋಗ ಹರಡುವ ಸಾಧ್ಯತೆಯಿದೆ. ಇವುಗಳ ಕಡಿತದಿಂದ, ಪರಚುವಿಕೆಯಿಂದ ತೆರೆದ ಚರ್ಮದ ಮೇಲೆ ನೆಕ್ಕುವಿಕೆಯಿಂದ, ಜೊಲ್ಲಿನ ಸಂಪರ್ಕದಿಂದ ರೋಗ ಹರಡುವ ಸಾಧ್ಯತೆ ಇದ್ದು, ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಲಸಿಕೆಗಳು ಲಭ್ಯವಿರುವಂತೆ ಕ್ರಮ ವಹಿಸಲಾಗಿದೆ ಎಂದು ಡಾ. ವೆಂಕಟೇಶ ರಾಠೋಡ್ ತಿಳಿಸಿದರು.

# ನಮ್ಮನಮ್ಮಲ್ಲಿಯೇ ವಿಂಗಡನೆ ಸರಿಯಲ್ಲ

▶▶ ಮೊದಲನೇ ಪುಟದಿಂದ

ಮಾಡಿರುವುದು ಸಂವಿಧಾನಕ್ಕೆ ಮಾಡಿದ ಅಪಮಾನವಾಗಿದೆ. ಪರಿಶಿಷ್ಟ ಜಾತಿಗಳಲ್ಲಿ ಬರುವ ಎಲ್ಲ ಜಾತಿಗಳು ಶೋಷಿತ ಹಾಗೂ ದಮನಿತ ಸಮುದಾಯಗಳೇ ಆಗಿರುವಾಗ ನಮ್ಮನಮ್ಮಲ್ಲಿಯೇ ವಿಂಗಡಿಸುವುದು ಸರಿಯಲ್ಲ ಎಂದರು. ಜಿಲ್ಲೆಯಲ್ಲಿ ಒಟ್ಟು 72 ತಾಂಡಾಗಳಿದ್ದು, 11 ದಿನಗಳ ಈ ಅಹೋರಾತ್ರಿ ಧರಣಿಯಲ್ಲಿ ಪ್ರತಿದಿನ ಐದು ತಾಂಡಾಗಳ ಜನ ಸರದಿಯಂತೆ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಚಂದು ನಾಯಕ, ಶಿವಪ್ಪ ನಾಯಕ, ದೇವು ನಾಯಕ, ಶಿವಪುತ್ರ ನಾಯಜ, ಮುತ್ತಪ್ಪ ಸಂದಕದ, ಕುಬೇರಪ್ಪ ಪವಾರ, ಸುರೇಶ ಮಹಾರಾಜ್, ಮಿಠಾ ನಾಯಕ, ಸುರೇಶ ಪೂಜಾರ, ಪರಮೇಶ ಲಮಾಣಿ ಇತರರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲು ಅವಕಾಶ




**ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯ ಚುನಾವಣಾಧಿಕಾರಿಗಳು, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳ, ಸಹಾಯಕ ಮತದಾರರ ನೋಂದಾಣಾಧಿಕಾರಿಗಳ ವಿಡಿಯೋ ಸಂವಾದದ ಮೂಲಕ ಸಭೆಯನ್ನು ಜರುಗಿಸಲಾಯಿತು.

ಸಭೆಯಲ್ಲಿ ಈಗಾಗಲೇ ನೇಮಕಾತಿ ಹೊಂದಿದ ಸಹಾಯಕ ಮತದಾರರ ನೋಂದಾಣಾಧಿಕಾರಿಗಳು, ನಿಯೋಜಿತ ಅಧಿಕಾರಿಗಳ ಕಚೇರಿಗಳಲ್ಲಿ ಸಾಕಾಷ್ಟು ಸಂಖ್ಯೆಯಲ್ಲಿ ನಮೂನೆ-18ರ ಅರ್ಜಿ ಫಾರ್ಮ್‌ಗಳು ಲಭ್ಯವಿದ್ದು, ಸದರಿ ಅರ್ಜಿಗಳನ್ನು ಅರ್ಹ ಎಲ್ಲ ಪದವೀಧರರು ಪಡೆದು, ಅದರೊಂದಿಗೆ ಸರಿಯಾದ ಅಗತ್ಯ ದಾಖಲೆಗಳನ್ನು ಲಗತ್ತಿಸಿ, ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಲು ನಿರ್ದೇಶಿಸಲಾಗಿದೆ.

ಹೊಸ ಮತದಾರರ ಪಟ್ಟಿ ತಯಾರಿಕೆಗೆ ಸಂಬಂಧಪಟ್ಟಂತೆ ಜಿಲ್ಲಾಧಿಕಾರಿಗಳು/ ಉಪವಿಭಾಗಾಧಿಕಾರಿಗಳು/ ತಹಸೀಲ್ದಾರರ ಕಚೇರಿಗಳಲ್ಲಿ ಸಹಾಯವಾಣಿಯನ್ನು ಸ್ಥಾಪಿಸಲು ನಿರ್ದೇಶಿಸಿದ್ದಾರೆ.

ಸದರಿ ಸಭೆಯಲ್ಲಿ ಮುಖ್ಯ ಚುನಾವಣಾಧಿಕಾರಿಗಳು ನೀಡಿದ ನಿರ್ದೇಶನದಂತೆ ಅಗತ್ಯ ಕ್ರಮ ಕೈಗೊಳ್ಳಲು ಜಿಲ್ಲಾ ಚುನಾವಣಾಧಿಕಾರಿಗಳು/ ಜಿಲ್ಲಾಧಿಕಾರಿಗಳು, ಧಾರವಾಡ, ಗದಗ, ಹಾವೇರಿ ಮತ್ತು ಉತ್ತರ ಕನ್ನಡ ಇವರಿಗೆ ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ಮತದಾರರ ನೋಂದಾಣಾಧಿಕಾರಿ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಕೆ.ಎಂ. ಜಾನಕಿ ಸೂಚನೆ ನೀಡಿದ್ದಾರೆ.

## ದಾಳಿ ನಿಲ್ಲಿಸುವಂತೆ ಟ್ರಂಪ್ ಕರೆ ಬೆನ್ನಲ್ಲೇ ಗಾಜಾದಲ್ಲಿ ಇಸ್ರೇಲ್ ದಾಳಿ; 6 ಜನರು ಸಾವು

**ವಿಜಯಸಾಕ್ಷಿ ಸುದ್ದಿ, ಗಾಜಾ**

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬಾಂಬ್ ದಾಳಿಯನ್ನು ನಿಲ್ಲಿಸಲು ನಿರ್ದೇಶಿಸಿ ಹಮಾಸ್ ಶಾಂತಿಗೆ ಸಿದ್ಧವಾಗಿದೆ ಎಂದು ಘೋಷಿಸಿದ ಕೆಲವೇ ಗಂಟೆಗಳಲ್ಲಿ ಇಸ್ರೇಲ್ ಶನಿವಾರ ಗಾಜಾದಲ್ಲಿ ನಡೆಸಿದ ಹೊಸ ದಾಳಿಯಲ್ಲಿ ಆರು ಜನರು ಸಾವನ್ನಪ್ಪಿದ್ದಾರೆ.

# ದಾಸೋಹ ಸೇವೆಗೆ ಭಕ್ತರೇ ಆಧಾರ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಹೂವಿನ ಶಿಗ್ಲಿ ಮಠದ ಗುರುಕುಲದಲ್ಲಿನ ನೂರಾರು ಮಕ್ಕಳ ತ್ರಿವಿಧ ದಾಸೋಹ ಸೇವೆಗೆ ಕೊರಡೂರಿನ ಗಿರಿಜಮ್ಮ ಶಿವಾನಂದ ಬಾಳೇಹೊಸೂರ ದಂಪತಿಗಳು 1,11,111 ರೂ ಧನ ಸಹಾಯ ಮಾಡಿದ್ದಲ್ಲದೇ ಗುರುಕುಲದ 10 ಅನಾಥ ಮಕ್ಕಳನ್ನು ಶೈಕ್ಷಣಿಕ ದತ್ತು ಸ್ವೀಕಾರ ಮಾಡಿ ಇತರರಿಗೆ ಮಾದರಿಯಾಗಿದ್ದಾರೆ.



ಶ್ರೀ ಮಠದ ಚನ್ನವೀರ ಮಹಾಸ್ವಾಮಿಗಳು ಈ ದಂಪತಿಗಳಿಗೆ ಗೌರವ ಪುರಸ್ಕಾರ ಮಾಡಿ ಆಶೀರ್ವಚನ ನೀಡಿ, ಪ್ರಸ್ತುತ ದಿನಮಾನಗಳಲ್ಲಿ ಜೀವನಾವಶ್ಯಕ ವಸ್ತುಗಳ ಬೆಲೆ ಗಗನಕ್ಕೇರುತ್ತಿದೆ. ಈ ಸಂದರ್ಭದಲ್ಲಿ ಸರ್ಕಾರದ ಸೌಲಭ್ಯವಿಲ್ಲದ ಮಠದ ಗುರುಕುಲದಲ್ಲಿನ 300ಕ್ಕೂ ಹೆಚ್ಚು ಮಕ್ಕಳಿಗೆ ನಿತ್ಯ ತ್ರಿವಿಧ ದಾಸೋಹ ಸೇವೆ ಅತ್ಯಂತ ಕಷ್ಟವಾಗಿದೆ. ಹರ ಮುನಿದರೂ ಗುರುಕಾಯುವರು ಎಂಬಂತೆ ಲಿಂ. ನಿರಂಜನ ಜಗದ್ಗುರುಗಳ ಆಶೀರ್ವಾದ, ಗ್ರಾಮಸ್ಥರ, ಭಕ್ತರ ಸಹಾಯ-ಸಹಕಾರದಿಂದ ಮಕ್ಕಳ ಸೇವೆ ಮಾಡಲು ಸಾಧ್ಯವಾಗುತ್ತಿದೆ. ಕೊರಡೂರಿನ ಗಿರಿಜಮ್ಮ ಶಿವಾನಂದ ಬಾಳೇಹೊಸೂರ ದಂಪತಿಗಳ ಸಹಾಯ-ಸಹಕಾರದಿಂದ ನೂರಾರು ಅನಾಥ, ಬಡ ಮಕ್ಕಳು ಸಂತೃಪ್ತರಾಗಿದ್ದು, ಗುರುಕುಲದ ತ್ರಿವಿಧ ದಾಸೋಹದ ಶ್ರೇಷ್ಠ ಪರಂಪರೆ ಮುಂದುವರೆಯಲು ಅನುಕೂಲವಾಗಿದೆ. ಮಠ-ಮಾನ್ಯಗಳ ತ್ರಿವಿಧ ದಾಸೋಹ ಸೇವೆಗೆ ಭಕ್ತರೇ ಆಧಾರ ಸ್ತಂಭವಾಗಿದ್ದಾರೆ. ಭಕ್ತರ ಸೇವೆಗೆ ಶ್ರೀಮಠದ ಆಶೀರ್ವಾದ ಮತ್ತು ಮಕ್ಕಳ ಶುಭ ಹಾರೈಕೆಯಿದ್ದು, ಭಗವಂತ ಅವರಿಗೆ ಇನ್ನಷ್ಟು ಸಂಪತ್ತು, ಶಕ್ತಿ ನೀಡಲಿ ಎಂದು ಹಾರೈಸಿದರು.

ಶ್ರೀಮಠದ ಗೌರವ ಸ್ವೀಕರಿಸಿದ ದಂಪತಿಗಳು ಮತ್ತು ಪುತ್ರರಾದ ಅರಣ್ಯಾಧಿಕಾರಿ ರಾಜು ಬಾಳೇಹೊಸೂರ ಮಾತನಾಡಿ, ಮಕ್ಕಳ ಸೇವೆ ದೇವರ ಸೇವೆಯಾಗಿದ್ದು, ಶ್ರೀಮಠವು ಬಡವರು, ನಿರ್ಗತಿಕರು ಮತ್ತು ಅನಾಥ ಮಕ್ಕಳಿಗಾಗಿ ಮಾಡುತ್ತಿರುವ ಸೇವೆಗೆ ತಮ್ಮದೊಂದು ಅಳಿಲು ಸೇವೆ ಸಲ್ಲಿಸಲು ಅವಕಾಶ ಸಿಕ್ಕಿರುವುದು ಸಂತೃಪ್ತಿ ತಂದಿದೆ. ಈ ಸೇವೆಯನ್ನು ಇನ್ನಷ್ಟು ಹೆಚ್ಚಿಸುವ ಶಕ್ತಿ ದೇವರು ನೀಡಲೆಂದು ಧನ್ಯತಾಭಾವದಿಂದ ಪ್ರಾರ್ಥಿಸುತ್ತೇವೆ ಎಂದರು.

# ರೋಗಕ್ಕೆ ಹೆದರದೆ ಸಕಾರಾತ್ಮಕವಾಗಿ ಸ್ಪಂದಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತಮ ಜೀವನ ಶೈಲಿ, ಪೌಷ್ಠಿಕ ಆಹಾರ ಸೇವನೆ, ದೈಹಿಕ ಚಟುವಟಿಕೆಗಳು ಸೇರಿದಂತೆ ಆರೋಗ್ಯಕರ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವ ಮೂಲಕ ಹೃದಯ ಆರೋಗ್ಯವನ್ನು ಕಾಪಾಡಿಕೊಂಡು ದೀರ್ಘಕಾಲ ಬದುಕಬಹುದೆಂದು ಪ್ರೊ. ಸುಧಾ ಕೌಜಗೇರಿ ಹೇಳಿದರು.




ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಐಕ್ಯುಎಸಿ, ಯುವ ರೆಡ್‌ಕ್ರಾಸ್ ಘಟಕ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ, ಎನ್.ಎಸ್.ಎಸ್ ಘಟಕ ಹಾಗೂ ಆರ್.ಎಂ.ಎಸ್ ನರ್ಸಿಂಗ್ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ಹೃದಯ ದಿನ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನರ್ಸಿಂಗ್ ಕಾಲೇಜಿನ ಉಪನ್ಯಾಸಕಿ ನೇತ್ರಾ ಮಾಳಿ ಮಾತನಾಡಿ, ಹೃದಯ ಸಂಬಂಧಿತ ಕಾಯಿಲೆಗಳು ಇತ್ತೀಚಿನ ದಿನಗಳಲ್ಲಿ ಯುವಕರಲ್ಲಿ ಹೆಚ್ಚಾಗಿ ಕಾಣುತ್ತಿದ್ದು, ಇದಕ್ಕೆ ಜೀವನ ಶೈಲಿ, ಆಹಾರ ಪದ್ಧತಿ, ಕೆಲಸದ ಒತ್ತಡ ಮೊದಲಾದವುಗಳು ಮುಖ್ಯ ಕಾರಣಗಳಾಗಿವೆ. ವಿದ್ಯಾರ್ಥಿಗಳು ವ್ಯಾಯಾಮ, ಯೋಗಾಸನ, ಧ್ಯಾನ ಮುಂತಾದ ಭೌತಿಕ ಮತ್ತು ಬೌದ್ಧಿಕ ಚಟುವಟಿಕೆಗಳೆಡೆಗೆ ಗಮನಹರಿಸಿ ಉತ್ತಮ ಆಹಾರ ಸೇವನೆ, ಧ್ಯಾನ, ಕನಿಷ್ಠ 6-8 ತಾಸುಗಳ ನಿದ್ದೆ ಮಾಡಬೇಕು. ರೋಗಕ್ಕೆ ಹೆದರದೆ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಹೇಳಿದರು. ಯುವ ರೆಡ್‌ಕ್ರಾಸ್ ಘಟಕದ ಸಂಯೋಜಕಿ ಮಹಾನಂದ ಹಿರೇಮಠ ಅತಿಥಿಗಳನ್ನು ಪರಿಚಯಿಸಿ ಸ್ವಾಗತಿಸಿದರು. ಎನ್.ಎಸ್.ಎಸ್ ಘಟಕದ ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡಿದರು. ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಹೃದಯದ ಆಕಾರ, ಸ್ವರೂಪ, ಕಾರ್ಯನಿರ್ವಹಣೆ, ಹೃದಯ ಸಂಬಂಧಿತ ಕಾಯಿಲೆಗಳು, ಮುಂಜಾಗ್ರತಾ ಕ್ರಮಗಳು, ಆಹಾರ ಪದ್ಧತಿ, ಜೀವನ ಶೈಲಿ, ಯೋಗಾಸನಗಳು, ಹೃದಯಾಘಾತ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಪ್ರಥಮ ಚಿಕಿತ್ಸೆ ಕುರಿತು ಪ್ರಾತ್ಯಕ್ಷಿಕೆ ಮೂಲಕ ವಿವರಣೆ ನೀಡಿದರು. ಬುಳ್ಳಪ್ಪ ಕಾರ್ಯಕ್ರಮ ನಿರ್ವಹಿಸಿದರು.

### ರಾಮಗೇರಿ ಶಾಲೆಯಲ್ಲಿ ಗುರುವಂದನಾ, ಪುಸ್ತಕ ಬಿಡುಗಡೆ ಕಾರ್ಯಕ್ರಮ

# ಗುರುವನ್ನು ನೆನೆಯುವುದು ಎಲ್ಲರ ಜವಾಬ್ದಾರಿ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ನಾವು ಯಾವುದೇ ಕೆಲಸ ಮಾಡುತ್ತಿದ್ದರೂ ಮೊದಲು ಅದನ್ನು ಗೌರವಿಸಬೇಕು. ಕರ್ತವ್ಯವನ್ನು ನಿಷ್ಠೆಯಿಂದ ಮಾಡಿದಾಗ ಮನಸ್ಸಿಗೆ ನೆಮ್ಮದಿ ಮತ್ತು ಆತ್ಮತೃಪ್ತಿ ದೊರೆಯುತ್ತದೆ. ಜಗತ್ತಿನಲ್ಲಿ ಅರಿವು ತೋರಿದ ಗುರುವನ್ನು ನೆನೆಯುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಗಂಜಿಗಟ್ಟಿ ಚರಮೂರ್ತೇಶ್ವರಮಠದ ಡಾ. ವೈಜನಾಥ ಶಿವಲಿಂಗೇಶ್ವರ ಶಿವಾಚಾರ್ಯ ಸ್ವಾಮೀಜಿ ನುಡಿದರು.

ಅವರು ತಾಲೂಕಿನ ರಾಮಗೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 1987-88ನೇ ಸಾಲಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸ್ನೇಹ ಬಳಗದಿಂದ ಗುರುವಂದನಾ ಹಾಗೂ ಶಿಕ್ಷಕ ಎನ್.ಎಸ್. ಮುಶೆಪ್ಪನವರ ಅವರ ಬರೆದ 'ಸಿದ್ಧಾರೂಢ ಸವಿ ನೆನಪು' ಕೃತಿ ಲೋಕಾರ್ಪಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಆಡಿವೆಕ್ಕ ಬೆಟಗೇರಿ ಕಾರ್ಯಕ್ರಮ ಉದ್ಘಾಟಿಸಿದರು. ನಿವೃತ್ತ ಡಿಡಿಪಿಐ ಅಂದಾನಪ್ಪ ವಡಗೇರಿ ಸಿದ್ಧಾರೂಢರ ಸವಿನೆನಪು ಪುಸ್ತಕ ಬಿಡುಗಡೆಗೊಳಿಸಿದರು. ಬರಹಗಾರ ಮಂಜುನಾಥ ಬಮ್ಮನಕಟ್ಟಿ ಪುಸ್ತಕ ಪರಿಚಯ ಮಾಡಿದರು. ನಿವೃತ್ತ ಉಪನಿರ್ದೇಶಕ ಐ.ಬಿ. ಬೆನಕೊಪ್ಪ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಾದ ಸಾವಿತ್ರಮ್ಮ ಗುಡಗೇರಿ, ಮಹದೇವಪ್ಪ ಕೊತ್ತಲ, ಪೂರ್ಣಾಜಿ ಖರಾಟೆ ಅವರಿಗೆ ಶಿಷ್ಯರು ಗುರು ವಂದನೆ ಸಲ್ಲಿಸಿದರು. ಭೂದಾನಿಗಳಾದ ವೀರನಗೌಡ ಪಾಟೀಲ, ಶಂಕರಗೌಡ ಪಾಟೀಲ, ವಿಶೇಷ ಸಾಧನೆಗೈದ ಡಿವೈಎಸ್ಪಿ ಶಂಕರಗೌಡ ಪಾಟೀಲ, ಮಂಜುನಾಥ ಬಮ್ಮನಕಟ್ಟಿ, ಡಾ. ಮಹಾಂತಪ್ಪ ಕೆರೂರ, ನಾಗಪ್ಪ ಮುಶೆಪ್ಪನವರ, ಜಗದೀಶ ದೊಡ್ಡಮನಿ, ಶೇಖಪ್ಪ ಯಂಗಾಡಿ ಸೇರಿದಂತೆ ವಿವಿಧ ರಂಗಗಳಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಬಸಣ್ಣ ಬೆಟಗೇರಿ, ಚನ್ನಬಸಪ್ಪ ಲಿಂಗಶೆಟ್ಟಿ, ಜಯಶ್ರೀ ಹಿರೇಮಠ, ಈರಮ್ಮ ಮಡಿವಾಳರ, ಸೋಮಣ್ಣ ಬೆಟಗೇರಿ, ಕೆ.ಸಿ. ಪನ್ನೀರ್, ಮಲ್ಲಪ್ಪ ಯಂಗಾಡಿ, ರಾಮಣ್ಣ ಕಾಳಿ, ಬಿ.ಎಫ್. ದೊಡ್ಡಮನಿ, ನೀಲೇಶ ಕಾಳೆ, ಗಾಳೆಪ್ಪ ಕರೆಪ್ಪನವರ, ನೀಲಪ್ಪ ಕೆರೂರ, ಶಿವಾನಂದ ಗುಡಗೇರಿ, ಫಕ್ಕೀರಪ್ಪ ಶೆಟ್ಟಪ್ಪನವರ, ಗುಡ್ಡಪ್ಪ ಬೇವಿನಮರದ, ಅಶೋಕ ಜಿಡ್ಡಿಮನಿ, ಮಹೇಂದ್ರ ಬೆಟಗೇರಿ, ಅಶೋಕ ಕಾಳಿ, ಯಲ್ಲಪ್ಪ ಬೆಟಗೇರಿ, ಪರುಶುರಾಮ ಲಕ್ಕಣ್ಣವರ, ಮಲ್ಲಿಕಾರ್ಜುನ ಅಂಗಡಿ, ಗಂಗಾಧರ ಕಾಳಿ, ನಬೀಸಾಬ್ ಇದ್ದರು. ಎಸ್. ವೈ. ಬೆಟಗೇರಿ ಸ್ವಾಗತಿಸಿದರು. ಬಿ.ಎಂ. ಯರಗುಪ್ಪಿ, ಮಂಜುನಾಥ ಅಂಗಡಿ ನಿರೂಪಿಸಿದರು.

> ಹೋತನಹಳ್ಳಿ ಸಿದ್ಧಾರೂಢಮಠದ ಶಂಕರಾನಂದ ಸ್ವಾಮೀಜಿ ಮಾತನಾಡಿ, ಸಿದ್ಧಾರೂಢರು ಸರಳವಾಗಿ ಬದುಕಿ ಬಾಳಿದ ಮಹಾತ್ಮರು. ಅವರ ಜೀವನ ಎಲ್ಲರಿಗೂ ಆದರ್ಶವಾಗಿದೆ. ಬೇರೆಯವರನ್ನು ಗೌರವಿಸುವ ಹಾಗೂ ಪ್ರೀತಿಸುವ ಗುಣ ಬೆಳೆಸಿಕೊಂಡಾಗ ಜಗತ್ತೇ ಸುಂದರವಾಗಿ ನಿರ್ಮಾಣವಾಗುತ್ತದೆ. ಇದೇ ಸಿದ್ಧಾರೂಢರು ಜಗತ್ತಿಗೆ ಸಾರಿದ ಮಂತ್ರವಾಗಿದೆ. ಶಿಕ್ಷಣದಿಂದ ಮಾತ್ರ ಪ್ರಗತಿ ಸಾಧ್ಯ ಎಂಬುದನ್ನು ಇಲ್ಲಿನವರು ಚೆನ್ನಾಗಿ ಅರಿತಿದ್ದಾರಲ್ಲದೆ, ಅದರಂತೆ ನಡೆದುಕೊಳ್ಳುತ್ತಿದ್ದಾರೆ ಎಂದರು.

# ರಾಷ್ಟ್ರಮಟ್ಟದ ಅಭಿವ್ಯಕ್ತಿ ಸ್ಪರ್ಧೆಯಲ್ಲಿ ಬಹುಮಾನ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಕಿವುಡ ಮಕ್ಕಳ ಶಾಲೆಯ ಮಕ್ಕಳು ತಮಿಳುನಾಡಿನ ಕನ್ಯಾಕುಮಾರಿಯಲ್ಲಿ ನಡೆದ ಅಭಿವ್ಯಕ್ತಿ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿ ನರೇಗಲ್ಲ ಪಟ್ಟಣಕ್ಕೆ ಕೀರ್ತಿ ತಂದಿದ್ದಾರೆ ಎಂದು ಮುಖ್ಯ ಶಿಕ್ಷಕ ಎಲ್. ಎಂ. ತಳಬಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕನ್ಯಾಕುಮಾರಿಯ ಅನಮ್ ಪ್ರೇಮ್ ಸಂಸ್ಥೆಯು ಏರ್ಪಡಿಸಿದ್ದ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ನಮ್ಮ ಶಾಲೆಯ ಮಕ್ಕಳು ಅಭಿವ್ಯಕ್ತಿ ಸ್ಪರ್ಧೆಯಲ್ಲಿ ಪ್ರಥಮ, ಚಿತ್ರಕಲೆಯಲ್ಲಿ ದ್ವಿತೀಯ, ಫುಟ್ಬಾಲ್‌ನಲ್ಲಿ ಸಮಾಧಾನಕರ ಬಹುಮಾನಗಳನ್ನು ಪಡೆದರು. ಶ್ರವಣ ಮತ್ತು ವಾಕ್‌ದೋಷದ 24ನೇ ರಾಷ್ಟ್ರೀಯ ಸಂಗಮದಲ್ಲಿ 12 ಮಕ್ಕಳು ಭಾಗವಹಿಸಿದ್ದರು. ಮಕ್ಕಳೊಂದಿಗೆ ತಾವು ಶಿಕ್ಷಕ ಆರ್. ಕೆ. ಬಾಗವಾನ ಮತ್ತು ನಾಗರಾಜ ಹೊಸಮನಿ ಪಾಲ್ಗೊಂಡಿದ್ದರು.

**ಅಭಿನಂದನೆ:** ರಾಷ್ಟ್ರ ಮಟ್ಟದಲ್ಲಿ ಶಾಲೆಯ ಕೀರ್ತಿ ಪತಾಕೆಯನ್ನು ಹಾರಿಸಿದ ಕಿವುಡ ಮಕ್ಕಳನ್ನು ಮತ್ತು ಅದಕ್ಕೆ ಮಕ್ಕಳನ್ನು ತಯಾರು ಮಾಡಿದ ಶಿಕ್ಷಕ ಬಳಗವನ್ನು ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಅಧ್ಯಕ್ಷರಾದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು, ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್. ಆರ್. ಗೌಡರ, ಆಡಳಿತ ಮಂಡಳಿಯ ಚೇರಮನ್ ಶರಣಪ್ಪ ರೇವಡಿ ಮತ್ತು ಸದಸ್ಯರು ಹೃತ್ಪೂರ್ವಕವಾಗಿ ಅಭಿನಂದಿಸಿದ್ದಾರೆ.

# ಮತದಾರರ ಪಟ್ಟಿಗೆ ಹೆಸರು ಸೇರಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಹೊಸದಾಗಿ ಮತದಾರ ಪಟ್ಟಿಗಳ ತಯಾರಿಕೆ ಕುರಿತಂತೆ ಭಾರತ ಚುನಾವಣಾ ಆಯೋಗವು 12.9.2025ರಂದು ಹೊಸದಾಗಿ ಮತದಾರ ಪಟ್ಟಿ ತಯಾರಿಸಲು ವೇಳಾಪಟ್ಟಿಯನ್ನು ಹೊರಡಿಸಿದೆ.

30.09.2025ರಿಂದ 06.11.2025ರವರೆಗೆ 01.11.2025ರ ಅರ್ಹತಾ ದಿನಾಂಕಕ್ಕಿಂತ ಮೂರು ವರ್ಷ ಮುಂಚೆ ಪದವಿ ಪೂರ್ಣಗೊಳಿಸಿದ ಅರ್ಹ ವ್ಯಕ್ತಿಯು ಪದವೀಧರ ಮತದಾರರಾಗಿ ಹೆಸರು ನೋಂದಣಿ ಮಾಡಲು ಅರ್ಜಿಯನ್ನು ನಮೂನೆ 18ರಲ್ಲಿ ಇತ್ತೀಚಿನ ಭಾವಚಿತ್ರ, ದೃಢೀಕರಿಸಲ್ಪಟ್ಟ ಪದವಿ ಪ್ರಮಾಣಪತ್ರಗಳು ಹಾಗೂ ಸಾಮಾನ್ಯವಾಗಿ ವಾಸಿಸುತ್ತಿರುವ ದಾಖಲೆಗಳನ್ನು ಸಹಾಯಕ ಮತದಾರ ನೋಂದಣಾಧಿಕಾರಿಗಳಿಗೆ ಅಥವಾ ಗೊತ್ತುಪಡಿಸಿದ ಅಧಿಕಾರಿಗಳಿಗೆ ಸಲ್ಲಿಸಿ ಮತದಾರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬಹುದು.

06.11.2025ರವರೆಗೆ ಸ್ವೀಕೃತ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಜಿಯನ್ನು ವಿಲೇಗೊಳಿಸಿ 25.11.2025ರಂದು ಕರಡು ಮತದಾರರ ಪಟ್ಟಿಯನ್ನು ಹೊರಡಿಸಲಾಗುವುದು. 25.11.2025ರಿಂದ 10.12.2025ರವರೆಗೆ ಕರಡು ಮತದಾರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲವಕಾಶವನ್ನು ನೀಡಲಾಗುವುದು. ಸದರಿ ಅವಧಿಯಲ್ಲಿ ಸ್ವೀಕೃತ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಜಿಗಳನ್ನು ವಿಲೇಗೊಳಿಸಿ 30.12.2025ರಂದು ಅಂತಿಮ ಮತದಾರ ಪಟ್ಟಿಯನ್ನು ಪ್ರಕಟಿಸಲಾಗುವುದು.

ಈ ಹಿಂದೆ ಕಳೆದ ದ್ವೈವಾರ್ಷಿಕ ಚುನಾವಣೆಯಲ್ಲಿ ಹೆಸರು ಸೇರ್ಪಡೆಗೊಂಡಿದ್ದವರು ಸಹ, ಪ್ರತಿ ಒಬ್ಬ ಅರ್ಹ ಮತದಾರರು ಹೊಸದಾಗಿ ಮತದಾರ ಪಟ್ಟಿಗೆ ನಮೂನೆ 18ನ್ನು ಸಲ್ಲಿಸಿ ಹೆಸರು ಸೇರ್ಪಡೆಗೊಳಿಸಬೇಕಾಗಿದೆ. ಕಾರಣ, ಪ್ರತಿಯೊಬ್ಬ ಅರ್ಹ ಮತದಾರರು ತಮ್ಮ ಹೆಸರುಗಳನ್ನು ಮತದಾರ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ, ಗದಗ ಮತ್ತು ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ ಸಹಾಯಕ ಮತದಾರ ನೋಂದಣಾಧಿಕಾರಿಗಳೂ ಆಗಿರುವ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಕಡಕೋಳದಲ್ಲಿ ವಿವಿಧ ಕಾಮಗಾರಿಗಳನ್ನು ಉದ್ಘಾಟಿಸಿದ ವಿ.ಪ ಸದಸ್ಯ ಯತೀಂದ್ರ ಸಿದ್ದರಾಮಯ್ಯ**

# ಗ್ಯಾರಂಟಿಯಿಂದ ಬಡವರ ಜೀವನ ಸುಧಾರಣೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಚುನಾವಣೆಯ ಪೂರ್ವದಲ್ಲಿ ನೀಡಿದ ಭರವಸೆಯಂತೆ ಅಧಿಕಾರಕ್ಕೆ ಬಂದ 8 ತಿಂಗಳಲ್ಲಿ ಪಂಚ ಗ್ಯಾರಂಟಿಗಳನ್ನು ಜಾರಿಗೊಳಿಸಿದ್ದರ ಪರಿಣಾಮ ಗ್ರಾಮೀಣ ಪ್ರದೇಶಗಳಲ್ಲಿ ಬಡ ಜನತೆಯ ಜೀವನ ಮಟ್ಟ ಸುಧಾರಣೆಯಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಹೇಳಿದರು.



ಅವರು ಶನಿವಾರ ಶಿರಹಟ್ಟಿ ತಾಲೂಕಿನ ಕಡಕೋಳ ಗ್ರಾಮದಲ್ಲಿ ಬಸವರಾಜ ಮ. ಕೊಂಚಿಗೇರಿ ಸರಕಾರಿ ಪ.ಪೂ ಮಹಾವಿದ್ಯಾಲಯದ ಕಟ್ಟಡ, ಗ್ರಂಥಾಲಯ ಉದ್ಘಾಟನೆ, ಎಚ್‌ಡಿಎಫ್‌ಸಿ ಬ್ಯಾಂಕ್ ಲೋಕಾರ್ಪಣೆ, ಸಂತೆಕಟ್ಟೆ ಉದ್ಘಾಟನೆ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಮೂರ್ತಿ ಅನಾವರಣ, ಘನತ್ಯಾಜ್ಯ ವಿಲೇವಾರಿ ಘಟಕ ಉದ್ಘಾಟನೆ ಹಾಗೂ ಶ್ರೀ ಬೀರೇಶ್ವರ ಸಮುದಾಯ ಭವನದ ನಿರ್ಮಾಣದ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ರಾಜ್ಯದಲ್ಲಿ 2 ಬಾರಿ ಸಿಎಂ ಆಗಿ ಶೋಷಿತರ, ಬಡವರ, ಅಲ್ಪಸಂಖ್ಯಾತರ, ಮಹಿಳೆಯರ ಮತ್ತು ರೈತರ ಪರವಾಗಿ ಶೋಷಿತರ ಧ್ವನಿಯಾಗಿ ಕೆಲಸ ಮಾಡುತ್ತಿರುವ ಸಿಎಂ ಸಿದ್ದರಾಮಯ್ಯ ಅವರಿಗೆ ನಿಮ್ಮ ಬೆಂಬಲ ಸದಾ ಹೀಗೇ ಇರಬೇಕು. ಸಮುದಾಯ ಭವನಕ್ಕೆ 51 ಲಕ್ಷ ರೂ.ಗಳನ್ನು ಸಿಎಂ ಅವರ ವಿವೇಚನ ನಿಧಿಯಲ್ಲಿ ಕೊಡಿಸಲಾಗುವುದು. ಕುಸಲಾಪೂರ ಗ್ರಾಮದಲ್ಲಿಯ ಸಮುದಾಯ ಭವನಕ್ಕೂ 25 ಲಕ್ಷ ರೂಗಳನ್ನು ನನ್ನ ಶಾಸಕರ ನಿಧಿಯಿಂದ ಕೊಡುತ್ತೇನೆ ಎಂದರು.

ಸಾನ್ನಿಧ್ಯ ವಹಿಸಿದ್ದ ಕಾಗಿನೆಲೆ ಮಹಾಸಂಸ್ಥಾನದ ಕನಕ ಗುರುಪೀಠದ ನಿರಂಜನಾನಂದ ಪುರಿ ಸ್ವಾಮೀಜಿ ಮಾತನಾಡಿ, ಗ್ರಾಮದಲ್ಲಿ ಗ್ರಂಥಾಲಯ ನಿರ್ಮಾಣ ಮಾಡಿದ್ದು ಶ್ಲಾಘನೀಯ. ಇದರಿಂದ ಗ್ರಾಮದಲ್ಲಿ ಶಿಕ್ಷಣದ ಗುಣಮಟ್ಟ ಹೆಚ್ಚಾಗಲಿದೆ. ಸಿಎಂ ಸಿದ್ದರಾಮಯ್ಯ ಅವರು ಪಕ್ಷದ ಸಂಘಟನೆ ಜೊತೆಗೆ ಶೋಷಿತರ ಧ್ವನಿಯಾಗಿದ್ದರು. ಇವರಂತೆ ಯತೀಂದ್ರ ಸಿದ್ದರಾಮಯ್ಯ ಅವರು ಕೂಡಾ ಇದೇ ಮಾರ್ಗದಲ್ಲಿ ನಡೆಯಬೇಕು, ಮುಂದಿನ ದಿನಗಳಲ್ಲಿ ದೊಡ್ಡ ನಾಯಕನಾಗಿ ಹೊರಹೊಮ್ಮಬೇಕೆಂದು ಹೇಳಿದರು.

> ಇತ್ತೀಚೆಗೆ ಬೆಂಗಳೂರು ಹಾಗೂ ತುಮಕೂರು ವಿಶ್ವವಿದ್ಯಾಲಯದ ತಜ್ಞರು 6300 ಕುಟುಂಬಗಳನ್ನು ಅಧ್ಯಯನ ಮಾಡಿದ್ದು, ಅದರಲ್ಲಿ ಶೇ. 84ರಷ್ಟು ಜನತೆ ಗ್ಯಾರಂಟಿ ಯೋಜನೆಗಳಿಂದ ನಮ್ಮ ಜೀವನ ಮಟ್ಟ ಸುಧಾರಿಸುತ್ತಿದೆ ಎಂದು ಹೇಳಿದ್ದಾರೆ. ಗ್ಯಾರಂಟಿ ಬಗ್ಗೆ ಟೀಕೆ ಮಾಡುತ್ತಿರುವವರಿಗೆ ಇದು ತಕ್ಕ ಉತ್ತರವಾಗಿದ್ದು, ವರ್ಷಕ್ಕೆ 52 ಸಾವಿರ ಕೋಟಿಯನ್ನು ಕಾಂಗ್ರೆಸ್ ಸರಕಾರ ಬಡವರಿಗೆ ನೀಡುತ್ತಿದೆ.
>
> – **ಯತೀಂದ್ರ ಸಿದ್ದರಾಮಯ್ಯ.**
> ವಿ.ಪ ಸದಸ್ಯರು.

ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ ಖಾದ್ರಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಜಿ.ಪಂ ಮಾಜಿ ಸದಸ್ಯ ಎಂ.ಎಸ್. ದೊಡ್ಡಗೌಡ್ರ ಮಾತನಾಡಿದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಗ್ರಾ.ಪಂ ಅಧ್ಯಕ್ಷೆ ಹೇಮಾ ಶರಣಪ್ಪ ಹರ್ಲಾಪೂರ, ವಿಶ್ವನಾಥ ಕಪ್ಪತ್ತನವರ, ತಿಪ್ಪಣ್ಣ ಕೊಂಚಿಗೇರಿ, ರುದ್ರಣ್ಣ ಗುಳಗುಳಿ, ಫಕ್ಕೀರಪ್ಪ ಹೆಬಸೂರ, ಶಿಲ್ಪಾ ಕುದಗೊಂಡ, ಕವಿತಾ ವಾರಂಗಲ್, ರಾಮಕೃಷ್ಣ ರೊಳ್ಳಿ, ಪ್ರಕಾಶ ಕರಿ, ಭಾಗ್ಯಶ್ರೀ ಬಾಬಣ್ಣ, ಡಿ.ಕೆ. ಹೊನ್ನಪ್ಪನವರ, ಗಿರಿಜಮ್ಮ ಲಮಾಣಿ, ರಾಮಣ್ಣ ಹರ್ಲಾಪೂರ, ಬಸಮ್ಮ ಮಾದರ, ಮಾರ್ತಾಂಡಪ್ಪ ಹಾದಿಮನಿ, ರುದ್ರಗೌಡ ಪಾಟೀಲ, ನಿರ್ಮಲಾ ಅಡವಿ, ಸಿದ್ದಪ್ಪ ಮುಧೋಳ, ಶಿವಪ್ಪ ಕದಂ, ಕೃಷ್ಣಾ ಲಮಾಣಿ, ಜಯವ್ವ ಉಪ್ಪಾರ, ಕಾವೇರಿ ಕಟಗಿ, ನೀಲವ್ವ ನೆರ್ತಿ ಮಂಜುನಾಥ ಹಾವೇರಿ, ಸುಜಾತಾ ಕಪ್ಪಲಿ, ಈರಯ್ಯ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

# ಶ್ರೀ ಅನ್ನಪೂರ್ಣೇಶ್ವರಿಯ ರಥವನ್ನೆಳೆದ ಮುತ್ತೈದೆಯರು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದ ನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವದ ಅಂಗವಾಗಿ ಶ್ರೀ ಅನ್ನಪೂರ್ಣೇಶ್ವರಿ ದೇವಿಯ ರಥವನ್ನು ಮುತ್ತೈದೆಯರು ಎಳೆಯುವ ಮೂಲಕ 11ನೇ ವರ್ಷದ ಜಾತ್ರೆಗೆ ಚಾಲನೆ ನೀಡಿದರು. ಶ್ರೀಮಠದ ಲಿಂ.ಶರಣಯ್ಯ ಸ್ವಾಮಿಗಳವರು ಮಹಿಳೆಯರಿಂದಲೇ ಅನ್ನಪೂರ್ಣೇಶ್ವರಿ ರಥವನ್ನು ಎಳೆಸಬೇಕು ಎಂಬ ಸಂಕಲ್ಪ ಮಾಡಿದ್ದು, ಅವರ ಸಂಕಲ್ಪವನ್ನು ಸದ್ಯ ಶ್ರೀಮಠದ ಧರ್ಮಾಧಿಕಾರಿಗಳಾದ ವೇದಮೂರ್ತಿ ಮಹೇಶ್ವ ಸ್ವಾಮಿಗಳು ಸಾಕಾರಗೊಳಿಸಿದ್ದಾರೆ.



ಭಾರತೀಯ ಪರಂಪರೆ, ಸನಾತನ ಧರ್ಮದಲ್ಲಿ ಮಹಿಳೆಯರಿಗೆ ಅಗ್ರ ಸ್ಥಾನವಿದೆ. ಗದುಗಿನ ಅಡವೀಂದ್ರ ಸ್ವಾಮಿಗಳ ಮಠದ ಅಧಿದೇವತೆ ಮಾತಾ ಅನ್ನಪೂರ್ಣೆಯಾಗಿರುವದರಿಂದ ಶ್ರೀಮಠದಲ್ಲಿ ಶಕ್ತಿ ದೇವತೆಯ ಪ್ರಮುಖ ಹಬ್ಬವಾದ ನವರಾತ್ರಿಯಲ್ಲಿ ನಡೆಯುವ ಜಾತ್ರಾ ಮಹೋತ್ಸವಕ್ಕೆ ಮುತ್ತೈದೆಯರಿಗೆ ಪ್ರಥಮ ಆದ್ಯತೆ.

ಅಡವೀಂದ್ರಸ್ವಾಮಿಗಳ ಮಠ ಸ್ಥಾಪನೆಯಾದಾಗಿನಿಂದ ಇಲ್ಲಿ ಮಹಿಳೆಯರಿಗೆ ಪ್ರಾಮುಖ್ಯತೆ ಹಾಗೂ ಪ್ರಾಶಸ್ತ್ಯವನ್ನು ನೀಡಿದ್ದು, ಪೂರ್ವಜರಾದ ಲಿಂ. ಶ್ರೀಶರಣಯ್ಯಾ ಸ್ವಾಮಿಗಳ ಆಶೀರ್ವಾದದೊಂದಿಗೆ, ಶಮಿ, ಆರಿ, ಬಿಲ್ವ, ವೃಕ್ಷಗಳ ಸಂಗಮವಾದ ಶ್ರೀಮಠದಲ್ಲಿ ಅನೂಚಾನವಾಗಿ ಮುನ್ನಡೆಸುತ್ತಾ ಬರಲಾಗಿದೆ. ಇದು ಅಪರೂಪದಲ್ಲಿಯೇ ಅಪರೂಪದ ಜಾತ್ರೆ. ಈ ದೃಶ್ಯವನ್ನು ಕಣ್ತುಂಬಿಕೊಳ್ಳದೇ ಇರುವವರೇ ವಂಚಿತರು.

2025ರ 45ನೇ ವರ್ಷದ ನವರಾತ್ರಿಯ ಶ್ರೀದೇವಿ ಪುರಾಣ ಪ್ರವಚನವನ್ನು ಡಾ. ರಾಜಗುರು ಶ್ರೀಗುರುಸ್ವಾಮಿ ಕಲಕೇರಿ ಗವಾಯಿಗಳು, ಸುಕ್ರುಸಾಬ ಮುಲ್ಲಾ ಹಾರ್ಮೋನಿಯಂ, ಶರಣಪ್ಪ ಗುತ್ತರಗಿ ತಬಲಾ ಸಾಥ್‌ನೊಂದಿಗೆ ಭಕ್ತರ ಮನಮುಟ್ಟುವಂತೆ ನಡೆಸಿಕೊಟ್ಟರು.

ಉತ್ಸವದ ಅಂಗವಾಗಿ ಹಲವಾರು ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಕುಮಾರಿಕಾ, ಮುತ್ತೈದೆಯರಿಗೆ ಬಾಗಿನ ಸಮರ್ಪಿಸುವುದರೊಂದಿಗೆ ಪಾದಪೂಜೆ ಮಾಡಲಾಯಿತು. 11ನೇ ವರ್ಷದ ಜಾತ್ರಾ ಮಹೋತ್ಸವಕ್ಕೆ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮಿಗಳು ಮಾರ್ಗದರ್ಶನ ಮಾಡಿದರು. ಈ ವರ್ಷದ ಜಾತ್ರಾ ಮಹೋತ್ಸವದ ಸಾನ್ನಿಧ್ಯವನ್ನು ಶ್ರೀನಿರಂಜನಪ್ರಭು ಡಾ. ಚನ್ನಮಲ್ಲ ಮಹಾಸ್ವಾಮಿಗಳು ಸುವರ್ಣಗಿರಿ ಸಂಸ್ಥಾನ ವಿರಕ್ತಮಠ (ಕಲ್ಮಠ) ಕನಕಗಿರಿ ಇವರು ವಹಿಸಿದ್ದರು. ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷರಾಗಿ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿಯಾಗಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿಯ ಅಧ್ಯಕ್ಷರಾಗಿ ಸುವರ್ಣಾ ಮದರಿಮಠ, ಕಾರ್ಯದರ್ಶಿಯಾಗಿ ಗೀತಾ ಹೂಗಾರ ಕಾರ್ಯ ನಿರ್ವಹಿಸಿದರು.

# ಧಮಕಿ ಹಾಕುವ ಪುಂಡರನ್ನು ಬಂಧಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್ ಪಕ್ಷದ ನಾಯಕರಾದ ರಾಹುಲ್ ಗಾಂಧಿಯವರಿಗೆ 'ಸೀನೆ ಮೆ ಗೋಲಿ ಮಾರೋ' ಎಂಬ ಧಮಕಿ ಕೊಡುವ ಪುಂಡರನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಉಮರ ಫಾರೂಕ ಹುಬ್ಬಳ್ಳಿಯವರ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಉಮರ ಫಾರೂಕ ಹುಬ್ಬಳ್ಳಿ ಮಾತನಾಡಿ, ಕಾಂಗ್ರೆಸ್ ಪಕ್ಷ ಭಾರತದ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸುವ ಪಕ್ಷವಾಗಿದೆ. ದೇಶಕ್ಕಾಗಿ ಸೇವೆ ಸಲ್ಲಿಸುವಾಗ ಕಾಂಗ್ರೆಸ್ ಪಕ್ಷದ ಅನೇಕ ನಾಯಕರು ಹತರಾಗಿರುವುದು ಭಾರತೀಯ ಪ್ರಗತಿಪರ ಮನಸ್ಸಿಗೆ ಘಾಸಿಯಾಗಿದೆ. ಇಂತಹ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಅನೇಕ ನಾಯಕರು ಅಸಂಬದ್ಧ, ಅಸಮಂಜಸ ಹೇಳಿಕೆ ನೀಡುತ್ತಿದ್ದಾರೆ. ಟೀಕೆ ಮಾಡುವುದು ರಾಜಕೀಯದಲ್ಲಿ ಅವಕಾಶವಿದ್ದರೂ ಆ ಟೀಕೆ-ಯು ಸಾಂವಿಧಾನಿಕವಾಗಿರಬೇಕೆ ಹೊರತು ಅಶಾಂತಿಯನ್ನು ಉಂಟುಮಾಡುವ ರೀತಿಯಲ್ಲಿ ಇರಬಾರದು.

ಹೀಗಾಗಿ, ಸದರಿ ಶಬ್ಧವನ್ನು ಉಚ್ಚಾರ ಮಾಡಿದ ಬಿಜೆಪಿ ನಾಯಕರನ್ನು ಮತ್ತು ಅವರನ್ನು ಬೆಂಬಲಿಸುವವರ ಮೇಲೆ ಕಾನೂನು ಕ್ರಮವನ್ನು ತೆಗೆದುಕೊಳ್ಳಬೇಕು ಎಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿಗಳಾದ ಇರ್ಫಾನ್ ಡಂಬಳ, ಖಾಲಿದ್ ಕೊಪ್ಪಳ, ಸಂಯೋಜಕರಾದ ಎಂ.ಬಿ. ನದಾಫ್ ವಕೀಲರು, ಉಮರ್ ಫಾರುಖ್ ಬಾರಿಗಿಡದ, ಸಾಮಾಜಿಕ ಜಾಲತಾಣದ ಜಿಲ್ಲಾಧ್ಯಕ್ಷ ರಮೇಶ್ ಹೊನ್ನಿನಾಯ್ಕರ, ಸಲೀಮ್ ಬಳ್ಳಾರಿ, ಮಹಬುಬ್ ಲಕ್ಷ್ಮೇಶ್ವರ, ಸರಫ್‌ರಾಜ್ ಬಬರ್ಚಿ, ನಿಜಾಮುದ್ದಿನ್ ಮುಂತಾದವರು ಉಪಸ್ಥಿತರಿದ್ದರು.

# ಜಿಲ್ಲಾಧಿಕಾರಿಗಳಿಂದ ಅರ್ಥಪೂರ್ಣ ದಸರಾ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸರಳತೆಗೆ ಮಾದರಿಯಾದ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಈ ಬಾರಿ ದಸರಾ ಹಬ್ಬವನ್ನು ಕಂದಾಯ ವಸತಿ ಆವರಣದಲ್ಲಿ ಪೌರ ಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿಯೊಂದಿಗೆ ಆಚರಿಸಿ ಹೊಸ ಸಂದೇಶ ನೀಡಿದ್ದಾರೆ.

ಅಕ್ಟೋಬರ್ 2ರಂದು ಕಂದಾಯ ವಸತಿ ಆವರಣದಲ್ಲಿ ನಡೆದ ವಿಜಯದಶಮಿ ಸಮಾರಂಭದಲ್ಲಿ ಜಿಲ್ಲಾಧಿಕಾರಿ ಕಚೇರಿಯ ನೌಕರರು, ಸ್ವಚ್ಛತಾ ಸಿಬ್ಬಂದಿ ಹಾಗೂ ಪೌರ ಕಾರ್ಮಿಕರು ಕುಟುಂಬ ಸಮೇತರಾಗಿ ಭಾಗವಹಿಸಿದ್ದರು. ಹಬ್ಬದ ಸಂಭ್ರಮವನ್ನು ಎಲ್ಲರೊಡನೆ ಹಂಚಿಕೊಂಡ ಜಿಲ್ಲಾಧಿಕಾರಿ, ಹೂವು-ಹಣ್ಣಿನ ವಿನಿಮಯ ಮಾಡಿ ದಸರಾ ಶುಭಾಶಯ ಕೋರಿದರು. ಈ ವೇಳೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಮ್ಮ ಕುಟುಂಬದ ಸದಸ್ಯರೊಂದಿಗೆ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡು ಕಾರ್ಮಿಕರೊಂದಿಗೆ ಸಂವಾದ ನಡೆಸಿದರು. ಅಧಿಕಾರಿಗಳು, ಕಚೇರಿ ಸಿಬ್ಬಂದಿ ಹಾಗೂ ಕಾರ್ಮಿಕರು ಒಂದೇ ವೇದಿಕೆಯಲ್ಲಿ ಸೇರಿ ಆಚರಿಸಿದ ಈ ಸರಳ ದಸರಾ ಕಾರ್ಯಕ್ರಮದಲ್ಲಿ ಎಲ್ಲರೂ ಸಮಾನವಾಗಿ ಹಬ್ಬದ ಆನಂದವನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ನಗರ ಸಭೆ ಪೌರಾಯುಕ್ತ ರಾಜಾರಾಮ ಪವಾರ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಆನಂದ ಬದಿ ಸೇರಿದಂತೆ ಇತರರು ಇದ್ದರು.



ಯುವ ಕರ್ನಾಟಕ ಭೀಮಸೇನೆ ಯುವಶಕ್ತಿ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಮಹಾತ್ಮ ಗಾಂಧೀಜಿ ಹಾಗೂ ಲಾಲ್‌ಬಹದ್ದೂರ್ ಶಾಸ್ತ್ರೀಜಿ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸೇನೆಯ ಜಿಲ್ಲಾಧ್ಯಕ್ಷ ರಾಮು ಬಾಗಲಕೋಟ, ಕಾರ್ಮಿಕ ಕಲ್ಯಾಣ ಸಂಸ್ಥೆಯ ಗೌರವಾಧ್ಯಕ್ಷ ಝುಡ್.ಡಿ. ಬೇಲೇರಿ, ಪ್ರಮುಖರಾದ ನಾಸಿರ್ ಚಿಕ್ಕೇನಕೊಪ್ಪ, ಮೌಲಾಸಾಬ್ ಗುಡಸಲಮನಿ, ಶಬ್ಬೀರ್ ತಹಸೀಲ್ದಾರ್, ಖಾಜಾಸಾಬ್ ಗಬ್ಬೂರ, ಯಂಕಪ್ಪ ತಾಳದವರ್, ಸಾಧಿಕ್ ಧಾರವಾಡ, ಖಾದರ್ ಭಾಷಾ ನವಲಗುಂದ್, ಶಹಬುದ್ದೀನ್ ಧಾರವಾಡ, ಮಹಮ್ಮದ್‌ರಫೀಕ್ ಹಣಗಿ, ಇಬ್ರಾಹಿಂ ಬಳ್ಳಾರಿ, ವಿರೂಪಾಕ್ಷಿ ಗುಡಿಮನಿ ಮುಂತಾದವರಿದ್ದರು.

**ಆರೋಗ್ಯ ಕೇಂದ್ರ ಕಾಮಗಾರಿಯ ಭೂಮಿಪೂಜೆ, ಸಾರ್ವಜನಿಕ ಗ್ರಂಥಾಲಯದ ಉದ್ಘಾಟನೆ ಶಾಸಕ ಜಿ.ಎಸ್. ಪಾಟೀಲ**

# ಗ್ರಂಥಾಲಯದಿಂದ ನಿಮ್ಮ ಜ್ಞಾನ ಹೆಚ್ಚಿಸಿಕೊಳ್ಳಿ



> ಸರ್ಕಾರ ಶಿಕ್ಷಣ ಕ್ಷೇತ್ರದಲ್ಲಿ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೂ ಉತ್ತಮ ಶಿಕ್ಷಣ ದೊರೆಯುವಂತೆ ಅನೇಕ ಯೋಜನೆಗಳನ್ನು ಹಾಕಿಕೊಂಡಿದ್ದು, ಅದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು. ವಿದ್ಯಾರ್ಜನೆಗಾಗಿ ಗ್ರಾಮೀಣ ಪ್ರದೇಶದಲ್ಲಿ ಗ್ರಾಮೀಣ ಡಿಜಿಟಲ್ ಲೈಬ್ರರಿಯನ್ನು ತೆರೆದಿದ್ದು, ಎಲ್ಲಾ ಆನ್‌ಲೈನ್ ಸೇವೆಗಳನ್ನು ಈ ಲೈಬ್ರೆರಿಯಲ್ಲಿ ವಿದ್ಯಾರ್ಥಿಗಳು ಪಡೆಯಬಹುದು. ಸಾರ್ವಜನಿಕರು, ವಿದ್ಯಾರ್ಥಿಗಳು ಇದರ ಲಾಭ ಪಡೆದು ಜ್ಞಾನವನ್ನು ಹೆಚ್ಚಿಸಿಕೊಂಡು ಸರಕಾರಿ ನೌಕರಿಯನ್ನು ಗಿಟ್ಟಿಸಿಕೊಳ್ಳಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ತಿಮ್ಮಾಪೂರ ಗ್ರಾಮದ ಪ್ರಾಥಮಿಕ ಆರೋಗ್ಯ ಮತ್ತು ಕ್ಷೇಮ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯ ಭೂಮಿಪೂಜೆ ಹಾಗೂ ಸಾರ್ವಜನಿಕ ಗ್ರಂಥಾಲಯವನ್ನು ರೋಣ ಶಾಸಕ ಜಿ.ಎಸ್. ಪಾಟೀಲ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, 61 ಲಕ್ಷ ರೂ ಮೌಲ್ಯದ ಸದರಿ ಕಾಮಗಾರಿಯನ್ನು ಗುಣಮಟ್ಟದಿಂದ, ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು. ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಥಮ ಚಿಕಿತ್ಸೆ ನೀಡುವುದಷ್ಟೇ ಅಲ್ಲದೆ, ಗ್ರಾಮೀಣ ಪ್ರದೇಶದ ಮಹಿಳೆಯರು, ಗರ್ಭಿಣಿ ಸ್ತ್ರೀಯರು, ಬಡವರಿಗೆ ಆಧಾರವಾಗಿದೆ. ಇಲ್ಲಿ ಉತ್ತಮ ಚಿಕಿತ್ಸೆ ನೀಡುವುದರಿಂದ ಪಟ್ಟಣ ಪ್ರದೇಶಕ್ಕೆ ಹೋಗುವ ಅನಿವಾರ್ಯತೆ ಎದುರಾಗುವುದಿಲ್ಲ ಎಂದರು. ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷೆ ಹನುಮವ್ವ ತಳವಾರ, ಉಪಾಧ್ಯಕ್ಷ ಹುಚ್ಚೀರಪ್ಪ ಜೋಗಿನ, ಬಸವರಾಜ ಯಲಬುರ್ಗಿ, ತಾ.ಪಂ ಮಾಜಿ ಅಧ್ಯಕ್ಷ ಕೃಷ್ಣೇಗೌಡ ಪಾಟೀಲ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮುತ್ತು ಕೊಣ್ಣೂರ, ಗದಗ ತಹಸೀಲ್ದಾರ ಶ್ರೀನಿವಾಸ್ ಕುಲಕರ್ಣಿ, ಪಂ.ರಾ ಇಂಜಿನಿಯರ್ ಚಾಟಿ, ಲೋಕೋಪಯೋಗಿ ಇಂಜಿನಿಯರ್ ಎಂ.ಎಸ್. ಪಾಟೀಲ್, ಆರೋಗ್ಯ ಇಲಾಖೆಯ ನೌಕರರ ಸಂಘದ ಅಧ್ಯಕ್ಷ ಎಸ್.ಎನ್. ಲಿಂಗದಾಳ, ಪ್ರಾಥಮಿಕ ಆರೋಗ್ಯ ಕೇಂದ್ರದ ನಿರೀಕ್ಷಣಾಧಿಕಾರಿ ಯಲ್ಲಪ್ಪ ಕಡಮನಿ, ಮುತ್ತಣ್ಣ ಹಟ್ಟಿಮನಿ, ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಬಾಬರಿ, ಪಿಡಿಓ ಶಿವಲೀಲಾ ಗೂಳಪ್ಪನವರ, ಹಿರಿಯರಾದ ಯಲ್ಲಪ್ಪ ಹಾಗಲದ, ಭೀಮಪ್ಪ ರಾಮಜಿ, ಸುರೇಶ್ ಬಿಸನಳ್ಳಿ, ಮಲ್ಲಿಕಾರ್ಜುನ ಇದ್ಲಿ, ಬಾಳಪ್ಪ ಗಂಗರಾತ್ರಿ, ಶರಣಪ್ಪ ಜೋಗಿನ, ರಾಮಪ್ಪ ಹಚ್ಚಪ್ಪನವರ, ಹನುಮಪ್ಪ ಭೀಮನೂರು, ಕುಬೇರಗೌಡ ಪಾಟೀಲ್, ಗಿರೀಶ ಗುಡ್ಲಾನೂರ, ಗುತ್ತಿಗೆದಾರ ಪ್ರಭು ಹೊಸಮನಿ ಮುಂತಾದವರಿದ್ದರು.

# ಮಹಿಳೆಯನ್ನು ಎಲ್ಲರೂ ಗೌರವಿಸಬೇಕು

▶▶ ಮೊದಲನೇ ಪುಟದಿಂದ

ನುಡಿಯನ್ನು ವೇ.ಮೂ ಪಂಚಾಕ್ಷರಯ್ಯ ಮರಿದೇವರಮಠ ನುಡಿದರು. ಕಾಶೀನಾಥ ಮರಿದೇವರಮಠ ಪುರಾಣ ಪಠಣ ಮಾಡಿದರು. ಶಂಕ್ರಪ್ಪ ಮಡ್ಡಿ ಸಂಗಡಿಗರಿಂದ ಸಂಗೀತ ಸೇವೆ ಜರುಗಿತು. ವೀರಪ್ಪ ಸಿದ್ದನಗೌಡರ ಹಾಗೂ ಪುರಾಣ ಪ್ರವಚನದಲ್ಲಿ ಸೇವೆ ಸಲ್ಲಿಸಿದವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಅಧ್ಯಕ್ಷತೆಯನ್ನು ಎಸ್.ಸಿ. ಬಡ್ನಿ ವಹಿಸಿದ್ದರು. ಅಶೋಕ ಸೋನಗೋಜಿ, ಬಸವರಾಜ ಹಾರೋಗೇರಿ, ರಾಮಣ್ಣಾ ಕಮಾಜಿ, ಮಾಹಾಂತೇಶ ನೀಲಗುಂದ, ನಾಗರಾಜ ದೇಶಪಾಂಡೆ, ಮಾಹಾದೇವಪ್ಪ ಗಡಾದ, ಪರಸಪ್ಪ ಸಂಗನಪೇಟಿ, ಗಂಗಪ್ಪ ಸುಂಕಾಪೂರ, ಮೌನೇಶ ನೀಲಗುಂದ, ಶಿವಾನಂದ ಬಸರಿಮರದ, ಚನ್ನಬಸಯ್ಯ ಹಿರೇಮಠ ಇದ್ದರು.

# ಪಾದಚಾರಿಗಳ ಸಾವಿನ ಸಂಖ್ಯೆಯಲ್ಲೂ ಬೆಂಗಳೂರು ಟಾಪ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪಾದಚಾರಿಗಳ ಸಾವಿನ ಸಂಖ್ಯೆಯಲ್ಲೂ ಬೆಂಗಳೂರು ಅಗ್ರಸ್ಥಾನವನ್ನು ಪಡೆದುಕೊಂಡಿದೆ.

ಈ ಆಘಾತಕಾರಿ ಮಾಹಿತಿಯನ್ನು ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ ತಿಳಿಸಿದೆ. 2023 ರಲ್ಲಿ ಬೆಂಗಳೂರಿನಲ್ಲಿ 292 ಪಾದಚಾರಿ ಸಾವುಗಳು ದಾಖಲಾಗಿವೆ, ಇದು ಭಾರತದ 53 ಪ್ರಮುಖ ನಗರಗಳಲ್ಲಿ ಸಂಭವಿಸಿದ ಸಾವುಗಳಲ್ಲಿ ಶೇಕಡಾ 9.48 ರಷ್ಟಿದೆ ಎಂದು ಹೇಳಲಾಗಿದೆ. ಇದೀಗ ಈ ವರದಿ ಪ್ರಕಾರ ಬೆಂಗಳೂರು ಅತಿ ಹೆಚ್ಚು ಪಾದಚಾರಿಗಳ ಸಾವಿನ ನಗರವಾಗಿದೆ. ಇದು ರಸ್ತೆಗಳಲ್ಲಿ ಸುರಕ್ಷತೆಯನ್ನು ಹೆಚ್ಚಿಸುವ ಅಗತ್ಯ ಇದೆ ಎಂಬುದನ್ನು ಹೇಳುತ್ತದೆ.

ಸಂಚಾರ ಪೊಲೀಸರು ಪಾದಚಾರಿಗಳ ಸಾವಿನ ಸಂಖ್ಯೆ ಏರಿಕೆಗೆ ಕಾರಣ ಎನ್ನಲಾಗುತ್ತಿದೆ. ವೇಗವಾಗಿ ಬೆಳೆಯುತ್ತಿರುವ ಜನಸಂಖ್ಯೆ, ಕಳಪೆ ಲೇನ್ ಶಿಸ್ತು, ಮೂಲಸೌಕರ್ಯ ಕೊರತೆಗಳು ಮತ್ತು ಹೆಚ್ಚುತ್ತಿರುವ ಅಪಘಾತ ಇದರಿಂದ ಈ ಸಂಖ್ಯೆ ಏರಿಕೆಯಾಗುತ್ತಿದೆ. ಬೆಂಗಳೂರಿನ ನಂತರ, ಅಹಮದಾಬಾದ್ (236) ಮತ್ತು ಜೈಪುರ (201) ಪಾದಚಾರಿಗಳ ಸಾವಿನ ಸಂಖ್ಯೆಯಲ್ಲಿ ಎರಡನೇ ಮತ್ತು ಮೂರನೇ ಸ್ಥಾನದಲ್ಲಿವೆ. ರಾಜ್ಯ ಮಟ್ಟದಲ್ಲಿ, ಕರ್ನಾಟಕವು 2,386 ಪಾದಚಾರಿ ಸಾವುಗಳನ್ನು ದಾಖಲಿಸಿದ್ದು, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮೂರನೇ ಸ್ಥಾನದಲ್ಲಿದೆ, ಬಿಹಾರ (3,462) ಮತ್ತು ತಮಿಳುನಾಡು (4,577) ನಂತರದ ಸ್ಥಾನದಲ್ಲಿದೆ ಎಂದು ವರದಿ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka